# ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳ ನಿಯಮಿತ

ನಂ.4, ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು-560 018

PAN N0 AAAAK0525H GST N0 29AAAAK0525H1ZW ಇಮೇಲ್ ಐಡಿ kscclfltd1964@gmail.com

ಸಂಖ್ಯೆ: ಕರಾಸಗ್ರಾಮ/ಆಡಳಿತ/ನೇ.ನೇ./01/2020-21 ದಿನಾಂಕ 05.03.2021

## ನೇಮಕಾತಿ ಪ್ರಕಟಣೆ

ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳ ನಿಯಮಿತ, ಬೆಂಗಳೂರು ಇದರಲ್ಲಿ ವಿವಿದ ವೃಂದದಲ್ಲಿ ಖಾಲಿ ಇರುವ ಒಟ್ಟು 43 ಹುದ್ದೆಗಳ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್‌ಲೈನ್ ಮುಖಾಂತರ ಆಹ್ವಾನಿಸಲಾಗಿದೆ. ಖುದ್ದಾಗಿ/ಅಂಚೆ/ಕೋರಿಯರ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶವಿಲ್ಲವೆಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ. ನೇರ ನೇಮಕಾತಿಗೆ ಪರಿಗಣಿಸಲಾಗಿರುವ ಹುದ್ದೆಗಳ ವಿವರ/ಮೀಸಲಾತಿ ಈ ಕೆಳಕಂಡಂತೆ ಇರುತ್ತದೆ.

| ಕ್ರ.ಸಂ. | ಹುದ್ದೆಯ ಹೆಸರು | ವೇತನ ಶ್ರೇಣಿ | ಒಟ್ಟು ಹುದ್ದೆಗಳು | ಮೀಸಲಾತಿ ವರ್ಗೀಕರಣ | ಒಟ್ಟು | ಒಳಮೀಸಲಾತಿ | | | |
|---|---|---|---|---|---|---|---|---|---|
| I | | | | | | ಇತರೆ | ಮ.ಅ. | ಗ್ರಾ.ಅ. | ಅಂ.ವಿ. |
| 1. | ಲೆಕ್ಕಿಗರು | 19000-34500 | 04 | ರಾಜ್ಯ ಮಟ್ಟದ ಉಳಿಕೆ ವೃಂದದ ಹುದ್ದೆಗಳು | | | | | |
| | | | | ಪ.ಜಾ. | 01 | 01 | -- | -- | -- |
| | | | | ಸಾ. | 02 | 01 | 01 | -- | -- |
| | | | | ಪ.ಪಂ. | 01 | 01 | -- | -- | -- |
| | | | | ಒಟ್ಟು | 04 | 03 | 01 | -- | -- |
| | ಲೆಕ್ಕಿಗರು | 19000-34500 | 01 | ರಾಜ್ಯ ಮಟ್ಟದ ಕ.ಕ. ವೃಂದದ (371ಜೆ) ಮೀಸಲಿರುವ ಹುದ್ದೆಗಳು | | | | | |
| | | | | ಸಾ. | 01 | 01 | -- | -- | -- |
| | | | | ಒಟ್ಟು | 01 | 01 | -- | -- | -- |
| 2. | ಪ್ರಥಮ ದರ್ಜೆ ಗುಮಾಸ್ತರು | 13600-26000 | 07 | ರಾಜ್ಯ ಮಟ್ಟದ ಉಳಿಕೆ ವೃಂದದ ಹುದ್ದೆಗಳು | | | | | |
| | | | | ಪ.ಜಾ. | 01 | 01 | -- | -- | -- |
| | | | | ಸಾ. | 03 | 01 | 01 | 01 | -- |
| | | | | ಪ.ಪಂ. | 01 | 01 | -- | -- | -- |
| | | | | ಪ್ರ.ವ.1 | 01 | 01 | -- | -- | -- |
| | | | | ಪ್ರ.ವ.2 ಎ | 01 | 01 | -- | -- | -- |
| | | | | ಒಟ್ಟು | 07 | 05 | 01 | 01 | -- |
| | ಪ್ರಥಮ ದರ್ಜೆ ಗುಮಾಸ್ತರು | 13600-26000 | 03 | ರಾಜ್ಯ ಮಟ್ಟದ ಕ.ಕ.ವೃಂದದ (371ಜೆ) ಮೀಸಲಿರುವ ಹುದ್ದೆಗಳು | | | | | |
| | | | | ಪ.ಜಾ. | 01 | 01 | -- | -- | -- |
| | | | | ಸಾ. | 01 | 01 | -- | -- | -- |
| | | | | ಪ.ಪಂ. | 01 | 01 | -- | -- | -- |
| | | | | ಒಟ್ಟು | 03 | 03 | -- | -- | -- |
| 3. | ವಿಕ್ರಯ ಸಹಾಯಕರು | 12500-24000 | 08 | ರಾಜ್ಯ ಮಟ್ಟದ ಉಳಿಕೆ ವೃಂದದ ಹುದ್ದೆಗಳು | | | | | |
| | | | | ಸಾ. | 04 | 01 | 02 | 01 | |
| | | | | ಪ್ರ. 2ಬಿ | 01 | 01 | -- | -- | -- |
| | | | | ಪ್ರ. 2(ಎ) | 01 | -- | 01 | -- | -- |
| | | | | ಪ.ಜಾ. | 01 | -- | -- | 01 | -- |
| | | | | ಪ್ರ. 3(ಎ) | 01 | 01 | -- | -- | -- |
| | | | | ಒಟ್ಟು | 08 | 03 | 03 | 02 | -- |

ವ್ಯವಸ್ಥಾಪಕ ನಿರ್ದೇಶಕರು

| ಕ್ರ.ಸಂ. | ಹುದ್ದೆಯ ಹೆಸರು | ವೇತನ ಶ್ರೇಣಿ | ಒಟ್ಟು ಹುದ್ದೆಗಳು | ಮೀಸಲಾತಿ ವರ್ಗೀಕರಣ | ಒಟ್ಟು | ಒಳಮೀಸಲಾತಿ | | | |
|---|---|---|---|---|---|---|---|---|---|
| I | | | | | | ಇತರೆ | ಮ.ಅ. | ಗ್ರಾ.ಅ. | ಅಂ.ವಿ. |
| | ವಿಕ್ರಯ ಸಹಾಯಕರು | 12500–24000 | 02 | ರಾಜ್ಯ ಮಟ್ಟದ ಕ.ಕ. ವೃಂದದ (371ಜೆ) ಮೀಸಲಿರುವ ಹುದ್ದೆಗಳು | | | | | |
| | | | | ಪ.ಜಾ. | 01 | 01 | -- | -- | -- |
| | | | | ಸಾ. | 01 | 01 | -- | -- | -- |
| | | | | ಒಟ್ಟು | 02 | 02 | -- | -- | -- |
| 4. | ಬೆರಳಚ್ಚುಗಾರರು | 12500–24000 | 07 | ರಾಜ್ಯ ಮಟ್ಟದ ಉಳಿಕೆ ವೃಂದದ ಹುದ್ದೆಗಳು | | | | | |
| | | | | ಪ.ಜಾ. | 01 | 01 | -- | -- | -- |
| | | | | ಸಾ. | 03 | 01 | 01 | 01 | -- |
| | | | | ಪ.ಪಂ. | 01 | 01 | -- | -- | -- |
| | | | | ಪ್ರ. 1 | 01 | 01 | -- | -- | -- |
| | | | | ಪ್ರ. 2(ಎ) | 01 | 01 | -- | -- | -- |
| | | | | ಒಟ್ಟು | 07 | 05 | 01 | 01 | -- |
| | ಬೆರಳಚ್ಚುಗಾರರು | 12500–24000 | 01 | ರಾಜ್ಯ ಮಟ್ಟದ ಕ.ಕ. ವೃಂದದ (371ಜೆ) ಮೀಸಲಿರುವ ಹುದ್ದೆಗಳು | | | | | |
| | | | | ಸಾ. | 01 | 01 | -- | -- | -- |
| | | | | ಒಟ್ಟು | 01 | 01 | -- | -- | -- |
| 5. | ಜವಾನರು | 10400–16400 | 08 | ರಾಜ್ಯ ಮಟ್ಟದ ಉಳಿಕೆ ವೃಂದದ ಹುದ್ದೆಗಳು | | | | | |
| | | | | ಪ.ಜಾ. | 01 | 01 | -- | -- | -- |
| | | | | ಸಾ. | 04 | 01 | 01 | 01 | 01 |
| | | | | ಪ.ಪಂ. | 01 | 01 | -- | -- | -- |
| | | | | ಪ್ರ. 1 | 01 | 01 | -- | -- | -- |
| | | | | ಪ್ರ. 2(ಎ) | 01 | 01 | -- | -- | -- |
| | | | | ಒಟ್ಟು | 08 | 05 | 01 | 01 | 01 |
| | ಜವಾನರು | 10400–16400 | 02 | ರಾಜ್ಯ ಮಟ್ಟದ ಕ.ಕ. ವೃಂದದ (371ಜೆ) ಮೀಸಲಿರುವ ಹುದ್ದೆಗಳು | | | | | |
| | | | | ಪ.ಜಾ. | 01 | 01 | -- | -- | -- |
| | | | | ಸಾ. | 01 | 01 | -- | -- | -- |
| | | | | ಒಟ್ಟು | 02 | 02 | -- | -- | -- |

ಅರ್ಜಿ ನಮೂನೆ, ಅರ್ಜಿ ಶುಲ್ಕ, ಆಯ್ಕೆ ವಿಧಾನ, ವಯೋಮಿತಿ, ಅರ್ಜಿ ಸಲ್ಲಿಕೆ, ವಿದ್ಯಾರ್ಹತೆ, ಇತ್ಯಾದಿ ವಿವರಗಳು ಈ ಕೆಳಗೆ ತಿಳಿಸಿದಂತೆ ಇದ್ದು, ಅಭ್ಯರ್ಥಿಗಳು ಅವುಗಳನ್ನು ಪೂರ್ಣವಾಗಿ ತಿಳಿದುಕೊಂಡು ಅರ್ಜಿ ಸಲ್ಲಿಸಲು ಸೂಚಿಸಿದೆ.

ವ್ಯವಸ್ಥಾಪಕ ನಿರ್ದೇಶಕರು

# ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳ ನಿಯಮಿತ

ನಂ.4, ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು–560 018

PAN N0 AAAAK0525H GST N0 29AAAAK0525H1ZW ಇಮೇಲ್ ಐಡಿ ksccfltd1964@gmail.com


ಸಂಖ್ಯೆ: ಕರಾಸಗ್ರಾಮ/ಆಡಳಿತ/ನೇ.ನೇ./02/2020–21 ದಿನಾಂಕ 05.03.2021

## ಬ್ಯಾಕ್‌ಲಾಗ್ ನೇಮಕಾತಿ ಪ್ರಕಟಣೆ

ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳ ನಿಯಮಿತ, ಬೆಂಗಳೂರು ಇದರಲ್ಲಿ ಖಾಲಿ ಇರುವ ಕಿರಿಯ ಫಾರ್ಮಾಸಿಸ್ಟ್ ಬ್ಯಾಕ್‌ಲಾಗ್ 2 ಹುದ್ದೆಗಳ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್‌ಲೈನ್ ಮುಖಾಂತರ ಆಹ್ವಾನಿಸಲಾಗಿದೆ. ಖುದ್ದಾಗಿ/ಅಂಚೆ/ಕೋರಿಯರ್ ಮೂಲಕ ಅರ್ಜಿ ಕಳುಹಿಸಲು ಅವಕಾಶವಿಲ್ಲವೆಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ. ಕಿರಿಯ ಫಾರ್ಮಾಸಿಸ್ಟ್ ವೃಂದದ ಬ್ಯಾಕ್‌ಲಾಗ್ ನೇರ ನೇಮಕಾತಿಗೆ ಪರಿಗಣಿಸಲಾಗಿರುವ ಹುದ್ದೆಗಳ ಮೀಸಲಾತಿ ವಿವರ ಈ ಕೆಳಕಂಡಂತೆ ಇರುತ್ತದೆ.

| ಕ್ರ.ಸಂ. | ಬ್ಯಾಕ್‌ಲಾಗ್ ಹುದ್ದೆಯ ಹೆಸರು | ವೇತನ ಶ್ರೇಣಿ | ಒಟ್ಟು ಹುದ್ದೆಗಳು | ಮೀಸಲಾತಿ ವರ್ಗೀಕರಣ | ಒಟ್ಟು | ಒಳಮೀಸಲಾತಿ | | | |
|---|---|---|---|---|---|---|---|---|---|
| | | | | | | ಇತರೆ | ಮ.ಅ. | ಗ್ರಾ.ಅ. | ಅಂ.ವಿ. |
| 1. | ಕಿರಿಯ ಫಾರ್ಮಾಸಿಸ್ಟ್ | 14550–26700 | 02 | ರಾಜ್ಯ ಮಟ್ಟದ ಉಳಿಕೆ ವೃಂದದ ಹುದ್ದೆಗಳು | | | | | |
| | | | | ಪ.ಜಾ. | 01 | 01 | -- | -- | -- |
| | | | | ಪ.ಪಂ. | 01 | 01 | -- | -- | -- |
| | | | | ಒಟ್ಟು | 02 | 02 | -- | -- | -- |

### ವಿದ್ಯಾರ್ಹತೆ:

| | | | |
|---|---|---|---|
| 1 | ಬ್ಯಾಕ್‌ಲಾಗ್ ಹುದ್ದೆ ಕಿರಿಯ ಫಾರ್ಮಾಸಿಸ್ಟ್ | 1 | ಡಿಪ್ಲೋಮಾ ಇನ್ ಫಾರ್ಮಾಸಿ ಪರೀಕ್ಷೆಯಲ್ಲಿ ಪಾಸಾಗಿರಬೇಕು. |
| | | 2 | ಕಂಪ್ಯೂಟರ್ ಅಪರೇಷನ್ಸ್ ಮತ್ತು ಅಪ್ಲಿಕೇಷನ್ಸ್‌ನಲ್ಲಿ ಜ್ಞಾನವಿರಬೇಕು. |
| | | 3 | ಕನ್ನಡವನ್ನು ಓದುವ ಸಾಮರ್ಥ್ಯದ ಜೊತೆ ಕನ್ನಡ ಜ್ಞಾನ, ಬರೆಯುವಿಕೆ, ಕನ್ನಡವನ್ನು ಸ್ವಚ್ಚವಾಗಿ ಮಾತನಾಡಬೇಕು ಮತ್ತು ಅರ್ಥಮಾಡಿಕೊಳ್ಳಬೇಕು |

ಕಿರಿಯ ಫಾರ್ಮಾಸಿಸ್ಟ್ ಹುದ್ದೆಗಳ ಬ್ಯಾಕ್‌ಲಾಗ್ ನೇಮಕಾತಿಯನ್ನು ಕರ್ನಾಟಕ ಸರ್ಕಾರದ ನಿಯಮಾನುಸಾರ ಆಯ್ಕೆಯನ್ನು ನಿಗದಿತ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳ ಅರ್ಹತೆ (ಮೆರಿಟ್) ಆಧಾರದ ಮೇಲೆ ಮಾಡಲಾಗುವುದು.

ಆನ್‌ಲೈನ್ ಮೂಲಕ ಬ್ಯಾಕ್‌ಲಾಗ್ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು, ಕಿರಿಯ ಫಾರ್ಮಾಸಿಸ್ಟ್ ಹುದ್ದೆಗೆ ಬ್ಯಾಕ್‌ಲಾಗ್ ಅರ್ಜಿ ನಮೂನೆಯಲ್ಲಿ ಅರ್ಜಿ ಸಲ್ಲಿಸತಕ್ಕದ್ದು.

ಅರ್ಜಿ ನಮೂನೆ, ಅರ್ಜಿ ಶುಲ್ಕ, ವಯೋಮಿತಿ, ಅರ್ಜಿ ಸಲ್ಲಿಕೆ, ಇತ್ಯಾದಿ ವಿವರಗಳು ಈ ಕೆಳಗೆ ತಿಳಿಸಿದಂತೆ ಇದ್ದು, ಅಭ್ಯರ್ಥಿಗಳು ಅವುಗಳನ್ನು ಪೂರ್ಣವಾಗಿ ಓದಿ, ತಿಳಿದುಕೊಂಡು ಅರ್ಜಿ ಸಲ್ಲಿಸಲು ಸೂಚಿಸಿದೆ.

ವ್ಯವಸ್ಥಾಪಕ ನಿರ್ದೇಶಕರು

**ನೇಮಕಾತಿ ಪ್ರಕಟಣೆ ಸಂಖ್ಯೆ: ಕರಾಸಗ್ರಾಮ/ಆಡಳಿತ/ನೇ.ನ./01/2020-21 ದಿನಾಂಕ 05.03.2021 ರಲ್ಲಿ ತಿಳಿಸಿದ ಎಲ್ಲಾ ಹುದ್ದೆಗಳಿಗೆ ಹಾಗೂ ಪ್ರಕಟಣೆ ಸಂಖ್ಯೆ: ಕರಾಸಗ್ರಾಮ/ಆಡಳಿತ/ನೇ.ನ/02/2020-21 ದಿನಾಂಕ 05.03.2021 ರಲ್ಲಿ ತಿಳಿಸಿದ ಬ್ಯಾಕ್‌ಲಾಗ್ ಹುದ್ದೆಗಳಿಗೆ ಅರ್ಜಿ ಸಲ್ಲಿಕೆ ವಿದ್ಯಾರ್ಹತೆ ಅರ್ಜಿ ನಮೂನೆ, ಅರ್ಜಿ ಶುಲ್ಕ, ಆಯ್ಕೆ ವಿಧಾನ ವಯೋಮಿತಿ ಇತ್ಯಾದಿ ವಿವರಗಳು**

371(ಜೆ) ಮೀಸಲಾತಿ: ಕಲ್ಯಾಣ ಕರ್ನಾಟಕ ವೃಂದದಲ್ಲಿ ಮೀಸಲಿರಿಸಿದ ಹುದ್ದೆಗಳು

ಉಳಿಕೆ ವೃಂದ: ರಾಜ್ಯ ಮಟ್ಟದ ಉಳಿಕೆ ವೃಂದ (371ಜೆ ಹೊರತುಪಡಿಸಿ)

ಮೀಸಲಾತಿಗೆ ಸಂಬಂಧಿಸಿದಂತೆ ಮೇಲಿನ ಅಂಕಣದಲ್ಲಿ ನಮೂದಿಸಿರುವ ಮೀಸಲಾತಿ ವಿವರಣೆಗಳನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳುವುದು.

| | | | |
|---|---|---|---|
| ಪ.ಜಾ. | :ಪರಿಶಿಷ್ಟ ಜಾತಿ, | ಪ್ರ.-2 (ಬಿ) | :ಪ್ರವರ್ಗ 2ಬಿ |
| ಪ.ಪಂ. | :ಪರಿಶಿಷ್ಟ ಪಂಗಡ | ಸಾ.ಅ. | :ಸಾಮಾನ್ಯ ಅಭ್ಯರ್ಥಿ |
| ಪ್ರ-1 | :ಪ್ರವರ್ಗ 1 | ಮ.ಅ. | :ಮಹಿಳಾ ಅಭ್ಯರ್ಥಿ |
| ಪ್ರ.-2 (ಎ) | :ಪ್ರವರ್ಗ 2ಎ | ಗ್ರಾ.ಅ. | :ಗ್ರಾಮೀಣ ಅಭ್ಯರ್ಥಿ |
| ಪ್ರ.-3(ಎ) | :ಪ್ರವರ್ಗ 3ಎ | ಅಂ.ವಿ | :ಅಂಗವಿಕಲ ಅಭ್ಯರ್ಥಿ |
| | | ಇತರೆ | :ಇತರೆ ಅಭ್ಯರ್ಥಿ |

ಮಹಿಳೆ/ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಿರಿಸಿದ ರಿಕ್ತಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ರಿಕ್ತಸ್ಥಾನಗಳನ್ನು ಆಯಾ ವರ್ಗಕ್ಕೆ ಸೇರಿದ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**1) ವಿದ್ಯಾರ್ಹತೆ:**-ಸಹಕಾರ ಸಂಘಗಳ ನಿಯಮಗಳು 1960ರ ನಿಯಮ 17(2)(ಎ) ಮತ್ತು ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳ ನಿಯಮಿತ ಬೆಂಗಳೂರು ಇದರ ಪೂರಕ ನಿಯಮಗಳಲ್ಲಿ ವಿವಿಧ ಹುದ್ದೆಗಳಿಗನುಗುಣವಾಗಿ ನಿಗದಿಪಡಿಸಿದ ವಿದ್ಯಾರ್ಹತೆ ಈ ಕೆಳಕಂಡಂತೆ ಇರುತ್ತದೆ.

| ಕ್ರ.ಸಂ. | ಹುದ್ದೆಯ ಹೆಸರು | ವಿದ್ಯಾರ್ಹತೆ |
|---|---|---|
| 1. | ಲೆಕ್ಕಿಗರು | 1. ಭಾರತೀಯ ಕಾನೂನಿನಿಂದ ಸ್ಥಾಪಿಸಲ್ಪಟ್ಟ ಯಾವುದೇ ವಿಶ್ವವಿದ್ಯಾಲಯದಿಂದ ಬಿ.ಕಾಂ/ ಸಹಕಾರ/ ನಿರ್ವಹಣೆ (Management) ಪದವೀಧರರಾಗಿರಬೇಕು.<br>2. ಕಂಪ್ಯೂಟರ್ ಅಪರೇಷನ್ಸ್ ಮತ್ತು ಅಪ್ಲಿಕೇಷನ್ಸ್ ಜ್ಞಾನದ ಜೊತೆಗೆ ಟ್ಯಾಲಿ ಕೋರ್ಸ್‌ನ ತೇರ್ಗಡೆ ಪತ್ರವನ್ನು ಹೊಂದಿರಬೇಕು.<br>3. ಕನ್ನಡವನ್ನು ಓದುವ ಸಾಮರ್ಥ್ಯದ ಜೊತೆ ಕನ್ನಡದ ಜ್ಞಾನ, ಬರೆಯುವಿಕೆ, ಕನ್ನಡವನ್ನು ಸ್ವಚ್ಛವಾಗಿ ಮಾತನಾಡಬೇಕು ಮತ್ತು ಅರ್ಥಮಾಡಿಕೊಳ್ಳಬೇಕು. |
| 2 | ಪ್ರಥಮ ದರ್ಜೆ ಗುಮಾಸ್ತರು | 1. ಭಾರತದ ಕಾನೂನಿನಡಿಯಲ್ಲಿ ಸ್ಥಾಪನೆಯಾದ ವಿಶ್ವವಿದ್ಯಾಲಯದ ಯಾವುದೇ ಪದವಿಯಲ್ಲಿ ತೇರ್ಗಡೆಯಾಗಿರಬೇಕು.<br>2. ಕನ್ನಡವನ್ನು ಓದುವ ಸಾಮರ್ಥ್ಯದ ಜೊತೆ ಕನ್ನಡದ ಜ್ಞಾನ, ಬರೆಯುವಿಕೆ, ಕನ್ನಡವನ್ನು ಸ್ವಚ್ಛವಾಗಿ ಮಾತನಾಡಬೇಕು ಮತ್ತು ಅರ್ಥಮಾಡಿಕೊಳ್ಳಬೇಕು; ಮತ್ತು<br>3. ಕಂಪ್ಯೂಟರ್ ಅಪರೇಷನ್ಸ್ ಮತ್ತು ಅಪ್ಲಿಕೇಷನ್ಸ್‌ನಲ್ಲಿ ಜ್ಞಾನ ಹೊಂದಿರಬೇಕು. |
| 3 | ವಿಕ್ರಯ ಸಹಾಯಕರು | 1. ದ್ವಿತೀಯ ಪಿಯುಸಿಯಲ್ಲಿ ಉತ್ತೀರ್ಣರಾಗಿರಬೇಕು<br>2. ಕನ್ನಡವನ್ನು ಓದುವ ಸಾಮರ್ಥ್ಯದ ಜೊತೆ ಕನ್ನಡದ ಜ್ಞಾನ, ಬರೆಯುವಿಕೆ, ಕನ್ನಡವನ್ನು ಸ್ವಚ್ಛವಾಗಿ ಮಾತನಾಡಬೇಕು ಮತ್ತು ಅರ್ಥಮಾಡಿಕೊಳ್ಳಬೇಕು; ಮತ್ತು<br>3. ಕಂಪ್ಯೂಟರ್ ಅಪರೇಷನ್ಸ್ ಮತ್ತು ಅಪ್ಲಿಕೇಷನ್ಸ್‌ನಲ್ಲಿ ಜ್ಞಾನವನ್ನು ಹೊಂದಿರಬೇಕು. |

ವ್ಯವಸ್ಥಾಪಕ ನಿರ್ದೇಶಕರು

| | | |
|---|---|---|
| 4 | ಬೆರಳಚ್ಚುಗಾರರು | 1. ದ್ವಿತೀಯ ಪಿಯುಸಿಯಲ್ಲಿ ಅಥವಾ ಮೂರು ವರ್ಷದ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್‌ನಲ್ಲಿ ಉತ್ತೀರ್ಣರಾಗಿರಬೇಕು;<br>2. ಸೀನಿಯರ್ ಕನ್ನಡ ಮತ್ತು ಇಂಗ್ಲಿಷ್ ಟೈಪ್‌ರೈಟಿಂಗ್‌ನಲ್ಲಿ ಉತ್ತೀರ್ಣರಾಗಿದ್ದು, ಕಂಪ್ಯೂಟರ್ ಅಪರೇಷನ್ಸ್ ಮತ್ತು ಅಪ್ಲಿಕೇಷನ್ಸ್ ನಲ್ಲಿ ಜ್ಞಾನವಿರಬೇಕು;<br>3. ಕನ್ನಡವನ್ನು ಓದುವ ಸಾಮರ್ಥ್ಯದ ಜೊತೆ ಕನ್ನಡದ ಜ್ಞಾನ, ಬರೆಯುವಿಕೆ, ಕನ್ನಡವನ್ನು ಸ್ವಚ್ಛವಾಗಿ ಮಾತನಾಡಬೇಕು ಮತ್ತು ಅರ್ಥಮಾಡಿಕೊಳ್ಳಬೇಕು.<br>**ವಿ.ಸೂಚನೆ:** ಕ್ರ.ಸಂ.2 ರಲ್ಲಿ ನಮೂದಿಸಿದ ಸೀನಿಯರ್ ಕನ್ನಡ ಮತ್ತು ಇಂಗ್ಲಿಷ್ ಟೈಪ್‌ರೈಟಿಂಗ್‌ನಲ್ಲಿ ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳು ಲಭ್ಯರಾಗದಿದ್ದಲ್ಲಿ, ಕಂಪ್ಯೂಟರ್ ಅಪರೇಷನ್ಸ್ ಮತ್ತು ಅಪ್ಲಿಕೇಷನ್ಸ್ ನಲ್ಲಿ ಜ್ಞಾನವಿರುವ ಅಭ್ಯರ್ಥಿಗಳನ್ನು ಲಿಖಿತ/ ತಾಂತ್ರಿಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದಲ್ಲಿ ಸಂದರ್ಶನಕ್ಕೆ ಪರಿಗಣಿಸಲಾಗುವುದು. |
| 5 | ಜವಾನರು | 1. ಎಸ್.ಎಸ್.ಎಲ್.ಸಿ.ಯಲ್ಲಿ ಉತ್ತೀರ್ಣರಾಗಿದ್ದು ಕನ್ನಡವನ್ನು ಒಂದು ಭಾಷೆಯಾಗಿ ಓದಿರಬೇಕು. |

**2) ವಯೋಮಿತಿ:-** ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕೆಳಕಂಡ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ನಿಗದಿತ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

| ವರ್ಗೀಕರಣದ ವಿವರ | ಕನಿಷ್ಠ ವಯೋಮಿತಿ | ಗರಿಷ್ಠ ವಯೋಮಿತಿ |
|---|---|---|
| ಸಾಮಾನ್ಯ ವರ್ಗ | 18 ವರ್ಷ ತುಂಬಿರಬೇಕು | 35 ವರ್ಷ ಮೀರಿರಬಾರದು |
| ಪ್ರವರ್ಗ2ಎ, ಪ್ರವರ್ಗ2ಬಿ, ಪ್ರವರ್ಗ3ಎ, ಪ್ರವರ್ಗ3ಬಿ | 18 ವರ್ಷ ತುಂಬಿರಬೇಕು | 38 ವರ್ಷ ಮೀರಿರಬಾರದು |
| ಪ.ಜಾ/ಪ.ಪಂ./ಪ್ರವರ್ಗ-1 | 18 ವರ್ಷ ತುಂಬಿರಬೇಕು | 40 ವರ್ಷ ಮೀರಿರಬಾರದು |

- ಮಾಜಿ ಸೈನಿಕರಿಗೆ ಅವರು ಸೇನೆಯಲ್ಲಿ ಸಲ್ಲಿಸಿದ ಅವಧಿ ಅಥವಾ ಗರಿಷ್ಠ 10 ವರ್ಷಗಳು, ಇದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ವಯೋಮಿತಿ ಸಡಿಲಿಕೆ ಇರುತ್ತದೆ.
- ಅಂಗವಿಕಲರಿಗೆ ಮತ್ತು ವಿಧವೆಯರಿಗೆ 10 ವರ್ಷಗಳ ವಯೋಮಿತಿ ಸಡಿಲಿಕೆ ಇರುತ್ತದೆ.
- ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳದಲ್ಲಿ ಸಂಚಿತ ವೇತನ ಆಧಾರದಲ್ಲಿ ನಿಗದಿತ ವಯೋಮಿತಿಯೊಳಗೆ ಸೇರಿ ಕಾರ್ಯ ನಿರ್ವಹಿಸುತ್ತಿರುವವರಿಗೆ 5 ವರ್ಷಗಳ ವಯೋಮಿತಿ ಸಡಿಲಿಕೆ ನೀಡಲಾಗುವುದು.

**3) ಅರ್ಜಿ ಶುಲ್ಕ**

| ಪ.ಜಾತಿ/ಪ.ಪಂ/ಪ್ರ.ವರ್ಗ-1 ಮತ್ತು ಅಂಗವಿಕಲ ಅಭ್ಯರ್ಥಿಗಳಿಗೆ | ಇತರೆ ವರ್ಗದ ಅಭ್ಯರ್ಥಿಗಳಿಗೆ |
|---|---|
| ರೂ.500.00 +ಅಂಚೆ ಕಛೇರಿ ಶುಲ್ಕ ರೂ.30.00 ಪ್ರತ್ಯೇಕ | ರೂ.1000.00 + ಅಂಚೆ ಕಛೇರಿ ಶುಲ್ಕ ರೂ.30.00 ಪ್ರತ್ಯೇಕ |

ವ್ಯವಸ್ಥಾಪಕ ನಿರ್ದೇಶಕರ

ಮಹಾಮಂಡಳದಲ್ಲಿ ಈ ಮೇಲಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಂಬಂಧ ನೇಮಕಾತಿ ಪ್ರಕ್ರಿಯೆಯ ಪೂರ್ಣ ವಿವರಗಳನ್ನು ಮಹಾಮಂಡಳದ ಜಾಲ ತಾಣದಿಂದ (ವೆಬ್‌ಸೈಟ್ ನಿಂದ) ಪಡೆದು ಆನ್–ಲೈನ್ (on-Line) ಮೂಲಕ ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸತಕ್ಕದ್ದು. ಇತರೆ ವಿಧಾನದಲ್ಲಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.
ಅರ್ಜಿ ಶುಲ್ಕವನ್ನು ಅಂಚೆ ಕಛೇರಿಯ ಕೆಲಸದ ವೇಳೆಯೊಳಗೆ ಕರ್ನಾಟಕ ರಾಜ್ಯದ ಯಾವುದೇ ಅಂಚೆ ಕಛೇರಿಗಳಲ್ಲಿ (E-payment post office only) ಮಾತ್ರ ಸಂದಾಯ ಮಾಡಬಹುದಾಗಿರುತ್ತದೆ.

**4) ಸೂಚನೆಗಳು:**

- ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದೇ ಅರ್ಜಿ ಸಲ್ಲಿಸತಕ್ಕದ್ದು. ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ, ಅಂತಹ ಅಭ್ಯರ್ಥಿಗಳು ಒಂದೇ ನೋಂದಣಿ ಸಂಖ್ಯೆಯಡಿಯಲ್ಲಿಯೇ ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿ ಶುಲ್ಕವನ್ನು ಪಾವತಿಸಿ, ಪ್ರತ್ಯೇಕವಾಗಿ ಅರ್ಜಿ ಸಲ್ಲಿಸತಕ್ಕದ್ದು.
- ಅರ್ಜಿಗಳನ್ನು ಆನ್–ಲೈನ್(on-Line) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು.ಅರ್ಜಿಗಳನ್ನು ಕೋರಿಯರ್ / ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ. ಒಂದು ವೇಳೆ ಆ ರೀತಿ ಅರ್ಜಿಗಳನ್ನು ಸಲ್ಲಿಸಿದರೆ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
- ಅಭ್ಯರ್ಥಿಗಳು ಅರ್ಜಿಯನ್ನು ಆನ್–ಲೈನ್(on-Line) ನಲ್ಲಿ ನೀಡಿರುವ ಸೂಚನೆಗಳನ್ವಯ ಮಾತ್ರ ಭರ್ತಿ ಮಾಡತಕ್ಕದ್ದು.
- ಅಭ್ಯರ್ಥಿಗಳು ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಅಭ್ಯರ್ಥಿಗಳು ಅರ್ಜಿಗಳಲ್ಲಿ ಅಪೂರ್ಣ ಮಾಹಿತಿ ನೀಡಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಆನ್–ಲೈನ್(on-Line) ಮೂಲಕ ಅರ್ಜಿಯನ್ನು ಸಲ್ಲಿಸುವ ಸಂದರ್ಭದಲ್ಲಿ ಅಪ್‌ಲೋಡ್ ಮಾಡಬೇಕಾದ ಪ್ರಮಾಣ ಪತ್ರ/ ದಾಖಲಾತಿಗಳನ್ನು ಸ್ಪಷ್ಟವಾಗಿ ಕಾಣುವಂತೆ ಮತ್ತು ಓದಲು ಸಾಧ್ಯವಾಗುವಂತೆ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡತಕ್ಕದ್ದು.
- ಮಹಾಮಂಡಳವು ಅಭ್ಯರ್ಥಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸುವುದಿಲ್ಲ.
- ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ, ಮೊಬೈಲ್ ನಂ. ಮತ್ತು ಇ–ಮೇಲ್ ಐ.ಡಿ.ಗಳ ಮೂಲಕವೇ ಸಂಪರ್ಕಿಸಲಾಗುವುದು.
- ನಿಗದಿತ ಶುಲ್ಕ ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಮತ್ತು ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಕ್ಕು ವಾಪಸ್ಸು ನೀಡಲಾಗುವುದಿಲ್ಲ.

**5 ಅಭ್ಯರ್ಥಿಗಳು ಆನ್–ಲೈನ್(on-Line) ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಈ ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.**

**ಹಂತ: 1.** ಅಭ್ಯರ್ಥಿಗಳು ಮಹಾಮಂಡಳದ ಅಧಿಕೃತ **webesite www.recruitapp.in/ksccf2021** ನ್ನು ಒತ್ತಿದ ಕೂಡಲೇ ಕಂಪ್ಯೂಟರ್ ಪರದೆಯ ಮೇಲೆ **CONSUMERS FEDERATION RECRUITMENT 2021** ಎಂದು ಮೂಡುತ್ತದೆ ಮತ್ತು ಅಧಿಸೂಚನೆ/ ಸೂಚನೆಗಳನ್ನು ಕಡ್ಡಾಯವಾಗಿ ಓದತಕ್ಕದ್ದು ಮತ್ತು ಅಂತಿಮವಾಗಿ ನಿಯಮ ಮತ್ತು ಷರತ್ತುಗಳನ್ನು ಕೆಳಗಿನ ಚೆಕ್ ಬಾಕ್ಸ್ ಅನ್ನು ಒತ್ತುವ ಮೂಲಕ ಒಪ್ಪಿಕೊಳ್ಳತಕ್ಕದ್ದು ಹಾಗೂ **New Registration** ಗುಂಡಿಯನ್ನು ಒತ್ತಿ ಮುಂದುವರಿಯುವುದು.

ವ್ಯವಸ್ಥಾಪಕ ನಿರ್ದೇಶಕರು

<u>**ಹಂತ: 2.**</u> ಸಂಬಂಧಪಟ್ಟ ಹುದ್ದೆಯನ್ನು ಆಯ್ಕೆ ಮಾಡಿ **Apply** ಗುಂಡಿಯನ್ನು ಒತ್ತಿ ಅರ್ಜಿಗಳನ್ನು ಭರ್ತಿ ಮಾಡತಕ್ಕದ್ದು. ಅರ್ಜಿಯನ್ನು ಭರ್ತಿ ಮಾಡಿದ ನಂತರ ನಮೂದಿಸಿದ ವಿವರಗಳನ್ನು ಮತ್ತೊಮ್ಮೆ ಕೂಲಂಕುಷವಾಗಿ ಪರಿಶೀಲಿಸಿಕೊಂಡು, ಎಲ್ಲಾ ವಿವರಗಳು ಸರಿಯಾಗಿರುತ್ತವೆ ಎಂದು ಖಚಿತಪಡಿಸಿಕೊಂಡ ನಂತರವೇ **Previwe** ಗುಂಡಿಯನ್ನು ಒತ್ತಿ ಮುಂದುವರಿಯುವುದು.

<u>**ಹಂತ: 3.**</u>ಅರ್ಜಿಯ ಯಾವುದೇ ವಿವರಗಳ ಬದಲಾವಣೆ ಅಗತ್ಯವಿದ್ದರೆ ಪೂರ್ವದರ್ಶನ ಪುಟದಲ್ಲಿ **Edit** ಗುಂಡಿಯನ್ನು ಒತ್ತಿ ನಿಮ್ಮ ಅರ್ಜಿಯಲ್ಲಿನ ಮಾಹಿತಿಗಳನ್ನು ಸರಿಪಡಿಸಿಕೊಂಡು ವಿವರಗಳು ಸರಿ ಇರುವುದನ್ನು ಖಚಿತಪಡಿಸಿಕೊಂಡು, ನಿಮ್ಮ ಸಹಿಯೊಂದಿಗಿನ ಪಾಸ್ ಪೋರ್ಟ್‌ಗಾತ್ರದ ಸ್ಕ್ಯಾನ್ ಮಾಡಿದ ಭಾವಚಿತ್ರವನ್ನು ಅಪ್ ಲೋಡ್ ಮಾಡುವ ಬಗ್ಗೆ **Next** ಗುಂಡಿಯನ್ನು ಒತ್ತುವುದು.

<u>**Note:**</u>ಈ ಹಂತದಲ್ಲಿ ಅಭ್ಯರ್ಥಿಯು ಕಂಪ್ಯೂಟರ್ ಪರದೆಯ ಮೇಲೆ ಮೂಡಲಾದ **Registration Id**ಯನ್ನು ತಪ್ಪದೇ ಬರೆದಿಟ್ಟುಕೊಳ್ಳಬೇಕು. ಅಭ್ಯರ್ಥಿಯು ನೋಂದಾಯಿಸಿದ **E-mail** ವಿಳಾಸಕ್ಕೆ ಒಂದು ಸ್ವಯಂಚಾಲಿತ **E-mail** ಮೂಲಕ **Registration Id** ಮತ್ತು **Password**ಅನ್ನು ಕಳುಹಿಸಲಾಗುವುದು.

ಅಭ್ಯರ್ಥಿಯು **Edit Application** ಗುಂಡಿಯನ್ನು ಒತ್ತಿ, ಅವರ **Registration Id** ಮತ್ತು **Next Password**ಅನ್ನು ಬಳಸಿ ತಮ್ಮ ವಿವರಗಳನ್ನು ಅಪ್ ಲೋಡ್ ಮಾಡಬಹುದು ಅಥವಾ ಅಪ್ ಲೋಡ್ ಮಾಡಿದ ಮಾಹಿತಿಯನ್ನು ಬದಲಾಯಿಸಬಹುದು.

<u>**ಹಂತ:4:**</u>ಅಭ್ಯರ್ಥಿಯು ಸ್ವ ಸಹಿಯೊಂದಿಗೆ ಸ್ಕ್ಯಾನ್ ಮಾಡಿದ ಪಾಸ್ ಪೋರ್ಟ್‌ಗಾತ್ರದ ಭಾವಚಿತ್ರವನ್ನು ಆಯ್ಕೆ ಮಾಡುವ ಬಗ್ಗೆ **Browse** ಗುಂಡಿಯನ್ನು ಒತ್ತಿ ಮತ್ತು ತಮ್ಮ ಸಹಿಯೊಂದಿಗೆ ಭಾವಚಿತ್ರವನ್ನು ಪೂರ್ವದರ್ಶನ ಮಾಡಲು **Submit** ಗುಂಡಿಯನ್ನು ಒತ್ತಿ, ಒಂದು ವೇಳೆ ತಪ್ಪಾದ ಭಾವಚಿತ್ರವನ್ನು ಅಪ್ ಲೋಡ್ ಮಾಡಿದ್ದಲ್ಲಿ ಮೇಲಿನ ಕ್ರಮವನ್ನು ಪುನರಾವರ್ತಿಸಿ ಮುಂದಿನ ಪುಟದ ಬಗ್ಗೆ **next** ಗುಂಡಿಯನ್ನು ಒತ್ತಿದರೆ ಅರ್ಜಿಯಲ್ಲಿನ ಯಾವುದೇ ವಿವರವನ್ನು ಬದಲಾಯಿಸಲು ಸಾಧ್ಯವಿರುವುದಿಲ್ಲ.

ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಭ್ಯರ್ಥಿಯು ತನ್ನ ಇತ್ತೀಚಿನ ಭಾವಚಿತ್ರವನ್ನು ಖಾಲಿ ಬಿಳಿ ಕಾಗದದ ಮೇಲೆ ಇರಿಸಿ, ಕಪ್ಪು, ಮಾರ್ಕರ್ ಪೆನ್ನಿನಿಂದ ಭಾವಚಿತ್ರದ ಸರಿ ಕೆಳಗೆ ಸಹಿ ಮಾಡಿರುವುದನ್ನು ಮತ್ತು ಅಂಕಣದೊಳಗೆ ಇರುವುದನ್ನು ಖಚಿತಪಡಿಸಿಕೊಳ್ಳುವುದು. ಯಾವುದೇಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು.

| | |
|---|---|
| **ಕಡತಗಾತ್ರ<50ಕೆ.ಬಿ** | <u>**ಪಾಸ್ ಪೋರ್ಟ್ ಭಾವಚಿತ್ರ ಮತ್ತು ಸಹಿ ಅಳತೆ**</u>   |

<u>**Note:**</u>ಅಭ್ಯರ್ಥಿಯು **photo upload** ಗುಂಡಿಯನ್ನು ಒತ್ತಿ ಅವರ **Registration Id** ಅನ್ನು ಮತ್ತು **Password** ಬಳಸಿ, ತಮ್ಮ ಸಹಿಯೊಂದಿಗೆ ಭಾವಚಿತ್ರವನ್ನುಅಪ್ ಲೋಡ್ ಮಾಡಬಹುದು ಅಥವಾ ತಪ್ಪಾದಲ್ಲಿ ಅದನ್ನು ಬದಲಾಯಿಸಬಹುದು. ಒಂದು ವೇಳೆ ಅಭ್ಯರ್ಥಿಯು ತಮ್ಮ ಬಾವಚಿತ್ರ ಮತ್ತು ಸಹಿಯನ್ನು ಅಪ್ ಲೋಡ್ ಮಾಡದಿದ್ದರೆ ಅವರ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

(ಸಹಿ)
ವ್ಯವಸ್ಥಾಪಕ ನಿರ್ದೇಶಕರು

<u>**ಹಂತ:5:**</u> ಅಭ್ಯರ್ಥಿಗಳು ಸಂಬಂಧಪಟ್ಟ ವಿದ್ಯಾರ್ಹತೆಯ ಎಲ್ಲಾ ಸೆಮಿಸ್ಟರ್/ವರ್ಷಗಳ ಅಂಕ ಪಟ್ಟಿಗಳು, ಕಂಪ್ಯೂಟರ್, ಟ್ಯಾಲಿ ಪ್ರಮಾಣ ಪತ್ರಗಳು, ಸೇವಾನುಭವ, ಮೀಸಲಾತಿ ಜಾತಿ ಪ್ರಮಾಣ ಪತ್ರ, ಅಂಗವಿಕಲ ದೃಢೀಕರಣ ಪತ್ರ, ಗ್ರಾಮೀಣ ಪ್ರಮಾಣ ಪತ್ರ, ಜನ್ಮ ದಿನಾಂಕಕ್ಕೆ ಸಂಬಂಧಿಸಿದ ಪ್ರಮಾಣ ಪತ್ರಗಳ ಜೆರಾಕ್ಸ್ ಪ್ರತಿಗಳಿಗೆ <u>**ಸ್ವಯಂ ದೃಢೀಕರಿಸಿ (Self Attestation)**</u> ಸಂಬಂಧಪಟ್ಟ ಎಲ್ಲಾ ಪ್ರಮಾಣ ಪತ್ರಗಳನ್ನು ಸ್ಕ್ಯಾನ್ ಮಾಡಿ **upload** ಮಾಡತಕ್ಕದ್ದು. ಅಪೂರ್ಣವಾಗಿರುವ ಪೋಟೋ ಮತ್ತು ಅಭ್ಯರ್ಥಿಯು ಸಹಿ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

<u>**ಹಂತ:6:**</u> ಅರ್ಜಿಯ ಮುದ್ರಣವನ್ನು ಪಡೆಯಲು **Print Application** ಗುಂಡಿಯನ್ನು ಒತ್ತಿದ ನಂತರವೇ **Application Preview** ಮೂಡಲಿದ್ದು, ಅಭ್ಯರ್ಥಿಗಳು ಅರ್ಜಿಯ ಪ್ರತಿಯನ್ನು **download** ಮಾಡಿಕೊಳ್ಳತಕ್ಕದ್ದು. **CONSUMERS FEDERATION** ಅಪೇಕ್ಷಿಸಿದಾಗ ಈ ಪ್ರತಿಯನ್ನು ಹಾಜರುಪಡಿಸಬೇಕು.

**ಹಂತ:7:** ಅರ್ಜಿ ಶುಲ್ಕವನ್ನು ಪಾವತಿಸುವುದಕ್ಕೆ Post Office **Challan** ಗುಂಡಿಯನ್ನು ಒತ್ತಿ **Challan** ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ಕರ್ನಾಟಕ ರಾಜ್ಯದಲ್ಲಿ ಯಾವುದೇ ಇ-ಪಾವತಿ **(E-Payment)** ಅಂಚೆ ಕಛೇರಿಗೆ ಹೋಗಿ ನಿಗದಿತ ಅರ್ಜಿ ಶುಲ್ಕ + ಅಂಚೆ ಶುಲ್ಕ (ರೂ.30/-)ಯನ್ನು ಪಾವತಿ ಮಾಡತಕ್ಕದ್ದು.

Note: ಶುಲ್ಕವನ್ನು ನಿಗದಿಪಡಿಸಿದ ಕೊನೆಯ ದಿನಾಂಕ06-04-2021 ರ ನಂತರ ಶುಲ್ಕವನ್ನು ಸಂದಾಯ ಮಾಡಲು ಅವಕಾಶವಿರುವುದಿಲ್ಲ. ಇದನ್ನು ಹೊರತುಪಡಿಸಿ ಡಿಡಿ/ಪೋಸ್ಟಲ್ ಆರ್ಡರ್/ಮನಿಯಾರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಸಂದಾಯ ಮಾಡದ ಅರ್ಜಿಗಳನ್ನು ಪರಿಗಣಿಸುವುದಿಲ್ಲ.

ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯು ಹಿಂತಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇತರೆ ಯಾವುದೇ ನೇಮಕಾತಿಗಳಿಗೆ ಹೊಂದಾಣಿಕೆಮಾಡಿಕೊಳ್ಳಲಾಗುವುದಿಲ್ಲ.

**ವಿ.ಸೂಚನೆ:** ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಯಾವುದಾದರೂ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ **(Help Line)** ನಂ. **6364818873** ಮೂಲಕ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆಯಬಹುದು (ವೇಳೆ: ಬೆಳಿಗ್ಗೆ10.00 ರಿಂದ ಸಂಜೆ6.00 ಗಂಟೆಯವರೆಗೆ)

<u>**Note:**</u>

1.ಅಭ್ಯರ್ಥಿಗಳು ನಿಗದಿಪಡಿಸಿದ ಕೊನೆಯ ದಿನಾಂಕದವರೆವಿಗೂ ವಿಳಂಬಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

2. ಮೊಬೈಲ್ ಕ್ಯಾಮರಾ ಸಹಾಯದಿಂದ ಸೆರೆ ಹಿಡಿದ/ ಸ್ಪಷ್ಟತೆ ಇಲ್ಲದೆ ಇರುವ ದಾಖಲಾತಿಗಳನ್ನು ಅಪ್ ಲೋಡ್ ಮಾಡಿದ್ದಲ್ಲಿ ಅಂಥಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

3. ನಿಗದಿತ ಶುಲ್ಕ ಪಾವತಿಸದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

4. ಅಭ್ಯರ್ಥಿಗಳು **Online** ಮೂಲಕ ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳ ಪ್ರತಿಗಳನ್ನು ಸ್ವಯಂ ದೃಢೀಕರಿಸಿ **(Self Attestation)** ಅಪ್‌ಲೋಡ್ ಮಾಡತಕ್ಕದ್ದು. ಆದರೆ ಪ್ರಮಾಣ

ವ್ಯವಸ್ಥಾಪಕ ನಿರ್ದೇಶಕರು

ಪತ್ರಗಳನ್ನು / ದಾಖಲಾತಿಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಅಂದರೆ ದಿನಾಂಕ 05–04–2021 ರೊಳಗೆಪಡೆದಿರಬೇಕು ಹಾಗೂ ಸಿಂಧುವಾಗಿರಬೇಕು.**CONSUMERS FEDERATION** ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು.

5. ಕಡ್ಡಾಯವಾಗಿ ಹಾಜರುಪಡಿಸಬೇಕಾದ ಎಲ್ಲಾ ಅಗತ್ಯ ಮೂಲ ಪ್ರಮಾಣ ಪತ್ರಗಳನ್ನು ಹಾಜರುಪಡಿಸದಿದ್ದಲ್ಲಿ, ಅಂತಹ ಅಭ್ಯರ್ಥಿಯು ನೇಮಕಾತಿಗೆ ಅರ್ಹತೆ ಹೊಂದುವುದಿಲ್ಲ.

6. ವಿವಿಧ ಮೀಸಲಾತಿ ಕೋರಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರುಪಡಿಸದಿದ್ದಲ್ಲಿ ಅಂತಹ ಅಭ್ಯರ್ಥಿಯು ಅಪೇಕ್ಷಿತ ಮೀಸಲಾತಿಯನ್ನು ಪಡೆಯಲು ಅರ್ಹರಾಗುವುದಿಲ್ಲ. ಅಭ್ಯರ್ಥಿಯು ಸಾಮಾನ್ಯ ವರ್ಗಕ್ಕೆ ಅನ್ವಯಿಸುವ ನಿಗದಿತ ಶುಲ್ಕ ಪಾವತಿಸಿ ಸಾಮಾನ್ಯ ವರ್ಗದ ಅರ್ಹತೆಯನ್ನು ಹೊಂದಿದ್ದಲ್ಲಿ ಮಾತ್ರ ಸಾಮಾನ್ಯ ವರ್ಗದ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.

**6) ಅರ್ಜಿ ಸಲ್ಲಿಸಲು ಪ್ರಾರಂಭ ಮತ್ತು ಕೊನೆಯ ದಿನಾಂಕ**

| | | |
|---|---|---|
| ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ 05–03–2021 | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 05–04–2021 ರೊಳಗೆ | ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ 06–04–2021 (ಅಂಚೆ ಕಛೇರಿಯ ಕಾರ್ಯ ನಿರ್ವಹಣೆಯ ವೇಳೆಯೊಳಗೆ) |

**7) ದುರ್ನಡತೆ:**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿದನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡು ಬಂದಲ್ಲಿ ಅವನು/ಅವಳು/ ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಸಂದರ್ಶನದಿಂದ/ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು. ಮುಂದೆ ಮಹಾಮಂಡಳವು ನೇಮಕಾತಿ ಮಾಡುವ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಉಚ್ಚಾಟಿಸಲಾಗುವುದು. (ಡಿಬಾರ್ ಮಾಡಲಾಗುವುದು)

**8) ನೇಮಕಾತಿಗೆ ಅನರ್ಹತೆಗಳು:**

1. ಯಾವುದೇ ನಿಷೇಧಿತ ಸಂಘ ಸಂಸ್ಥೆಯ ಸದಸ್ಯನಾಗಿರುವಲ್ಲಿ ಅಥವಾ ಸದಸ್ಯನಾಗಿದ್ದಲ್ಲಿ ಅಥವಾ ಯಾವುದೇ ನಿಷೇಧಿತ ಸಂಘ ಸಂಸ್ಥೆಯ ಚಟುವಟಿಕೆಯಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದಲ್ಲಿ.
2. ಭಾರತ ಸಂವಿಧಾನಕ್ಕೆ ಚ್ಯುತಿ ತರುವ ಕಾರ್ಯದಲ್ಲಿ ಪ್ರವೃತ್ತನಾದಲ್ಲಿ.
3. ಕಾನೂನು ಭಂಗ ಮಾಡಿ ಹಿಂಸಾ ಕೃತ್ಯದಲ್ಲಿ ತೊಡಗಿಕೊಂಡಿದ್ದಲ್ಲಿ.
4. ಭಾರತ ದೇಶದ ಸಾರ್ವಭೌಮತೆಗೆ ಹಾಗೂ ಸುಭದ್ರತೆಗೆ ಧಕ್ಕೆ ತರುವ ಕಾರ್ಯದಲ್ಲಿ ತೊಡಗಿಕೊಂಡಿದ್ದಲ್ಲಿ.
5. ಭಾರತ ಸರ್ಕಾರದ ಅಥವಾ ಯಾವುದೇ ರಾಜ್ಯ ಸರ್ಕಾರದ ಸೇವೆಯಿಂದ ಉಚ್ಚಾಟನೆಗೊಂಡಿದ್ದಲ್ಲಿ.

ವ್ಯವಸ್ಥಾಪಕ ನಿರ್ದೇಶಕರು

6. ವ್ಯಕ್ತಿಯು ನ್ಯಾಯಬಾಹಿರ ಕೃತ್ಯಗಳಲ್ಲಿ ತೊಡಗಿ ಅಪರಾಧಕ್ಕೆ ಒಳಗಾದ ಪ್ರಸಂಗಗಳಲ್ಲಿ, ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿಯು ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ವಿವಾಹವಾಗಿರುವ ಮಹಿಳಾ ಅಭ್ಯರ್ಥಿಯು ನೇಮಕಾತಿಗೆ ಅರ್ಹರಿರುವುದಿಲ್ಲ.

**9) ಆಯ್ಕೆ ವಿಧಾನ:**

**on-line** ಮುಖಾಂತರ ಸ್ವೀಕರಿಸಲಾದ ಅರ್ಜಿಗಳನ್ನು, ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆ ಹಾಗೂ ಅಗತ್ಯ ದಾಖಲಾತಿಗಳ ಆಧಾರದ ಮೇಲೆ ಪರಿಶೀಲಿಸಿ, ಅರ್ಹ ಅಭ್ಯರ್ಥಿಗಳಿಗೆ ಸರ್ಕಾರವು ಸೂಚಿಸಲಾಗಿರುವ ಬಾಹ್ಯ ಮೂಲ ಸಂಸ್ಥೆಗಳಿಂದ ಲಿಖಿತ ಪರೀಕ್ಷೆಯನ್ನು ಏರ್ಪಡಿಸಲಾಗುವುದು. ಹುದ್ದೆಗಳಿಗೆ ನಿಗದಿ ಪಡಿಸಿದ ಅರ್ಹತಾ/ ಲಿಖಿತ ಮತ್ತು ತಾಂತ್ರಿಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಶೇಕಡಾವಾರು ಆಧಾರದ ಮೇಲೆ 1:5ರ ಅನುಪಾತ ದಲ್ಲಿ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನಕ್ಕೆ ನಿಗದಿಪಡಿಸಿದ ಅಂಕಗಳು 15. ಲಿಖಿತ ಪರೀಕ್ಷೆಯಲ್ಲಿ ಪಡೆಯಲಾದ ಅಂಕಗಳನ್ನು ಶೇಕಡಾ 85ಕ್ಕೆ ಇಳಿಸಿ ಮತ್ತು ಸಂದರ್ಶನಲ್ಲಿ ಗಳಿಸಿದ ಅಂಕಗಳನ್ನು ಒಟ್ಟುಗೂಡಿಸಿ ಪಡೆಯಲಾದ ಒಟ್ಟು ಅಂಕಗಳ ಆಧಾರದ ಮೇಲೆ ಯಶಸ್ವಿ ಅಭ್ಯರ್ಥಿಗಳ ಒಂದು ಅರ್ಹತಾ ಪಟ್ಟಿಯನ್ನು (ಮೆರಿಟ್) ತಯಾರಿಸಲಾಗುವುದು. ಅರ್ಹತಾ(ಮೆರಿಟ್) ಪಟ್ಟಿಯ ಆಧಾರದ ಮೇಲೆ ಕರ್ನಾಟಕ ಸರ್ಕಾರದ ಮೀಸಲಾತಿ ನಿಯಮಗಳನ್ನು ಅನುಸರಿಸಿ ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು. ಅಭ್ಯರ್ಥಿಗಳ ಆಯ್ಕೆಯ ಬಗ್ಗೆ ನೇಮಕಾತಿ ಪ್ರಾಧಿಕಾರದ ನಿರ್ಣಯವೇ ಅಂತಿಮವಾಗಿರುತ್ತದೆ.

**10) ಲಿಖಿತ ಪರೀಕ್ಷೆ:-**

ಕೆಳಕಂಡ ವಿಷಯಗಳ ಕುರಿತು ಬಾಹ್ಯ ಮೂಲ ಸಂಸ್ಥೆಗಳಿಂದ ಲಿಖಿತ ಪರೀಕ್ಷೆ ನಡೆಸಲಾಗುವುದು.

(ಅ) ಲೆಕ್ಕಿಗರು, ಪ್ರಥಮ ದರ್ಜೆ ಗುಮಾಸ್ತರು, ವಿಕ್ರಯ ಸಹಾಯಕರು ಹುದ್ದೆಗಳಿಗೆ:

1. ಪ್ರಥಮ ಪತ್ರಿಕೆ:-

| | |
|---|---|
| ಕನ್ನಡ ಭಾಷೆ | - 50 ಅಂಕಗಳು |
| ಸಾಮಾನ್ಯ ಆಂಗ್ಲ ಭಾಷೆ (General English) | - 25 ಅಂಕಗಳು |
| ಸಾಮಾನ್ಯ ಜ್ಞಾನ | - 25 ಅಂಕಗಳು |
| ಒಟ್ಟು | - 100 ಅಂಕಗಳು |

2. ದ್ವಿತೀಯ ಪತ್ರಿಕೆ:-

| | |
|---|---|
| ಸಹಕಾರಿ ವಿಷಯ | - 50 ಅಂಕಗಳು |
| ಭಾರತದ ಸಂವಿಧಾನ | - 25 ಅಂಕಗಳು |
| ಸಮಾಜಯುಕ್ತವಾದ ಚಟುವಟಿಕೆಗಳು ಹಾಗೂ ವಸ್ತುನಿಷ್ಠ ವಿಷಯಗಳು | - 25 ಅಂಕಗಳು |
| ಒಟ್ಟು | - 100 ಅಂಕಗಳು |

ವ್ಯವಸ್ಥಾಪಕ ನಿರ್ದೇಶಕರು

(ಆ) ಬೆರಳಚ್ಚುಗಾರರ ಹುದ್ದೆಗಳಿಗೆ:

1. ಪ್ರಥಮ ಪತ್ರಿಕೆ

| | | |
|---|---|---|
| ಕನ್ನಡ ಭಾಷೆ | - | 50 ಅಂಕಗಳು |
| ಸಾಮಾನ್ಯ ಆಂಗ್ಲ ಭಾಷೆ | - | 25 ಅಂಕಗಳು |
| ಸಾಮಾನ್ಯ ಜ್ಞಾನ | - | 25 ಅಂಕಗಳು |
| ಒಟ್ಟು | - | 100 ಅಂಕಗಳು |

2. ದ್ವಿತೀಯ ಪತ್ರಿಕೆ

| | | |
|---|---|---|
| ಕಂಪ್ಯೂಟರ್ ಪರೀಕ್ಷೆ ಹಾಗೂ ಬೆರಳಚ್ಚು ವಿಷಯಗಳಿಗೆ ಪರೀಕ್ಷೆ | - | 100 ಅಂಕಗಳು |

**(ಇ) ಜವಾನರ ಹುದ್ದೆಗಳಿಗೆ:**

ನಿರ್ದಿಷ್ಟ ಪಡಿಸಲಾದ ಅರ್ಹತೆಯುಳ್ಳ ಪರಿಕ್ಷೇಯಲ್ಲಿ ಪಡೆದುಕೊಂಡ ಪ್ರತಿಶತ ಅಂಕಗಳ ಆಧಾರದ ಮೇಲೆ 1:5ರ ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು. ಅರ್ಹತೆಯುಳ್ಳ ಪರಿಕ್ಷೇಯಲ್ಲಿ ಪಡೆಯಲಾದ ಅಂಕಗಳನ್ನು ಶೇ.85ಕ್ಕೆ ಇಳಿಸಿ ಉಳಿದ ಪ್ರತಿಶತ 15 ಅಂಕಗಳನ್ನು ಸಂದರ್ಶನಕ್ಕೆ ನೀಡಲಾಗುವುದು. ಅರ್ಹತಾ ಪರಿಕ್ಷೇಯಲ್ಲಿ ಪಡೆಯಲಾದ ಅಂಕಗಳನ್ನು ಶೇ.85ಕ್ಕೆ ಇಳಿಸಿ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಒಟ್ಟು ಗೂಡಿಸಿ ಮೆರಿಟ್ ಆಧಾರದ ಮೇಲೆ ಅರ್ಹತಾ ಪಟ್ಟಿ ತಯಾರಿಸಿ ಮೀಸಲಾತಿ ಅನುಸರಿಸಿ ಆಯ್ಕೆ ಪಟ್ಟಿ ಸಿದ್ದಪಡಿಸಿ ನೇಮಕಾತಿ ಮಾಡಿಕೊಳ್ಳಲಾಗುವುದು.

ಲಿಖಿತ ಪರೀಕ್ಷೆ ಹಾಗೂ ಸಂದರ್ಶನಕ್ಕೆ ಮಹಾಮಂಡಳವು ತಿಳಿಸಿದ ಸ್ಥಳಕ್ಕೆ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

ಲಿಖಿತ ಪರೀಕ್ಷೆಗೆ ಅರ್ಹವಿರುವ ಅಭ್ಯರ್ಥಿಗಳಿಗೆ ಪ್ರವೇಶ ಪತ್ರ ಹಾಗೂ ಲಿಖಿತ ಪರೀಕ್ಷೆಯ ದಿನಾಂಕ ಮತ್ತು ಸಮಯವನ್ನು ಅಧಿಕೃತ ವೆಬ್‌ಸೈಟ್‌ನಲ್ಲಿ ತಿಳಿಸಲಾಗುವುದು. ಅರ್ಹ ಅರ್ಭ್ಯರ್ಥಿಗಳು ಲಿಖಿತ ಪರೀಕ್ಷೆಯ ಪ್ರವೇಶ ಪತ್ರ **(E-call letters)**ಗಳನ್ನು ಅಧಿಕೃತ ಜಾಲತಾಣದಿಂದ **webesite www.recruitapp.in/ksccf2021** ಡೌನ್‌ಲೋಡ್ ಮಾಡಿಕೊಂಡು, ಲಿಖಿತ ಪರೀಕ್ಷೆಗೆ ಪ್ರವೇಶ ಪಡೆಯಲು ಹಾಜರುಪಡಿಸತಕ್ಕದ್ದು.

**11) ಪರೀಕ್ಷಾರ್ಥ ಅವಧಿ:** ಆಯ್ಕೆಗೊಂಡ ಅಭ್ಯರ್ಥಿಗಳನ್ನು ಪ್ರಾರಂಭದಲ್ಲಿ ಎರಡು ವರ್ಷಗಳ ಪರೀಕ್ಷಾರ್ಥ ಅವಧಿಗೆ ನೇಮಕಾತಿ ಮಾಡಲಾಗುವುದು. ಅವಶ್ಯವಿದ್ದಲ್ಲಿ ಪರೀಕ್ಷಾರ್ಥ ಅವಧಿಯನ್ನು ವಿಸ್ತರಿಸಲಾಗುವುದು. ಪರೀಕ್ಷಾರ್ಥ ಅವಧಿಯಲ್ಲಿ ಸೇವೆ ತೃಪ್ತಿಕರವಾಗಿದ್ದಲ್ಲಿ ಮಾತ್ರ ಸೇವೆಯನ್ನು ಖಾಯಂಗೊಳಿಸಲಾಗುವುದು.

**12) ಅರ್ಹತಾ ಷರತ್ತುಗಳು:**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿಯು

ವ್ಯವಸ್ಥಾಪಕ ನಿರ್ದೇಶಕರು

ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ವಿವಾಹವಾಗಿರುವ ಮಹಿಳಾ ಅಭ್ಯರ್ಥಿಯು, ನೇಮಕಾತಿಗೆ ಅರ್ಹರಿರುವುದಿಲ್ಲ.

ಇ) ಅಭ್ಯರ್ಥಿಯು ಮಾನಸಿಕವಾಗಿ, ದೈಹಿಕವಾಗಿ ಮತ್ತು ಆರೋಗ್ಯವಂತನಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನು ಉಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಈ) ಆಯ್ಕೆಯಾದ ಅಭ್ಯರ್ಥಿಗಳು ದೇಹ ಸ್ಥಿತಿಯ ಬಗ್ಗೆ ಜಿಲ್ಲಾ ವೈದ್ಯಾಧಿಕಾರಿಗಳಿಂದ ಪಡೆದ ಅರ್ಹತಾ ಪತ್ರ ಹಾಗೂ ಕ್ರಿಮಿನಲ್ ಮೊಕದ್ದಮೆಗಳಲ್ಲಿ ಭಾಗಿಯಾಗದಿರುವ ಬಗ್ಗೆ ಸಂಬಂಧಪಟ್ಟ ಆರಕ್ಷಕ ಠಾಣೆಯ ಅಧಿಕಾರಿಗಳಿಂದ ದೃಢೀಕರಣ ಪತ್ರ ಪಡೆದು ತರುವುದು.

ಉ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುವುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಮಹಾಮಂಡಳವು ಕಾಯ್ದಿರಿಸಿಕೊಂಡಿದೆ.

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಬಹುದು.

**13) ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು:**

ಮೀಸಲಾತಿ ಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದುಕೊಂಡಿರತಕ್ಕದ್ದು ಮತ್ತು ಚಾಲ್ತಿಯಲ್ಲಿರತಕ್ಕದ್ದು.

| | |
|---|---|
| ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು | : ನಮೂನೆ 'ಡಿ' |
| ಆ) ಪ್ರವರ್ಗ-1ಕ್ಕೆ ಸೇರಿದ ಅಭ್ಯರ್ಥಿಗಳು | : ನಮೂನೆ 'ಇ' |
| ಇ) ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು | : ನಮೂನೆ 'ಎಫ್' |

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಸೀಲ್ದಾರ್‌ರವರಿಂದ ಪಡೆದುಕೊಂಡಿರತಕ್ಕದ್ದು. ಅಂದರೆ ಹಿಂದುಳಿದ ವರ್ಗಗಳ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು 5 ವರ್ಷ ಚಾಲ್ತಿಯಲ್ಲಿರುತ್ತವೆ. ಅರ್ಜಿಯ ನಿಗದಿತ ಸ್ಥಳದಲ್ಲಿ ಪ್ರಮಾಣ ಪತ್ರವನ್ನು ತಪ್ಪದೇ ಅಪ್‌ಲೋಡ್ ಮಾಡತಕ್ಕದ್ದು ಹಾಗೂ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಯನ್ನು ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ತಪ್ಪದೇ ಪರಿಶೀಲನೆಗೆ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯ ಅಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು. ಪ್ರಮಾಣ ಪತ್ರಗಳ ನಮೂನೆಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ **ಈ ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ.**

ವ್ಯವಸ್ಥಾಪಕ ನಿರ್ದೇಶಕರು

**13.1) ಗ್ರಾಮೀಣ ಅಭ್ಯರ್ಥಿ:**

ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣ ರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೈಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2 ನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಸೀಲ್ದಾರ್‌ರವರಿಂದ ಪಡೆದುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ಮೀಸಲಾತಿ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು ಪಡೆದುಕೊಂಡಿರತಕ್ಕದ್ದು ಹಾಗೂ ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಯನ್ನು ತಪ್ಪದೇ ಪರಿಶೀಲನೆಗೆ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು.(ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ).

**13.2) ಅಂಗವಿಕಲ ಅಭ್ಯರ್ಥಿ:** ಸರ್ಕಾರದ ಅಧಿಸೂಚನೆಗಳನ್ವಯ ಅಂಗವಿಕಲರಿಗೆ ಮೀಸಲಾತಿಯನ್ನು ಕಲ್ಪಿಸಿದ್ದು, ಇದರನ್ವಯ ಶೇಕಡ 40ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ನಿಗದಿ ಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರದಿಂದ ಪ್ರಮಾಣ ಪತ್ರ ಪಡೆದುಕೊಂಡಿರತಕ್ಕದ್ದು. ಬೇರೆ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಹಾಗೂ ಗುರುತಿನ ಚೀಟಿಯ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. **ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನದ ವೇಳೆ ಹಾಜರುಪಡಿಸತಕ್ಕದ್ದು.**

**13.3) ವಿಧವೆಯರು:**

ವಿಧವೆಯರಿಗೆ 10 ವರ್ಷಗಳ ವಯೋಮಿತಿ ಸಡಿಲಿಕೆಗೆ ಪರಿಗಣಿಸಲು, ಅಭ್ಯರ್ಥಿಯು ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂದು ಪ್ರಮಾಣ ಪತ್ರವನ್ನು ತಹಶೀಲ್ದಾರರಿಂದ ಪಡೆದುಕೊಂಡು, (ಜೆರಾಕ್ಸ್ ಅಪ್‌ಲೋಡ್ ಮಾಡಿ) ಮಹಾಮಂಡಳವು ಸೂಚಿಸಿದಾಗ ಇದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು.

**13.4)** ಅನುಚ್ಛೇದ 371(ಜೆ) ರಂತೆ ಕಲ್ಯಾಣ- ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ:

ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ - ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಅನುಬಂಧ- "ಎ" ರಲ್ಲಿ ಸೂಚಿಸಿರುವ ನಮೂನೆಯಲ್ಲಿಯೇ ಅರ್ಹತಾ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರದ ಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಆಯುಕ್ತರಿಂದ ನಿಗದಿಪಡಿಸಿದ ಕೊನೆಯ ದಿನಾಂಕ

ವ್ಯವಸ್ಥಾಪಕ ನಿರ್ದೇಶಕರು

ದೊಳಗೆ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದುಕೊಂಡಿರತಕ್ಕದ್ದು ಹಾಗೂ ಇದರ ಪ್ರತಿಯನ್ನು ಅನ್‌ಲೈನ್ ನಲ್ಲಿ ಅಪ್‌ಲೋಡ್ ಮಾಡತಕ್ಕದ್ದು. ಈ ಪ್ರಮಾಣ ಪತ್ರದ ನಮೂನೆಯನ್ನು ಅನುಬಂಧ "ಎ" ರಡಿಯಲ್ಲಿ ತೋರಿಸಲಾಗಿದೆ.

ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಯು ಮಿಕ್ಕುಳಿದ ವೃಂದದ ಹುದ್ದೆಗಳಿಗೂ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳು ಸ್ಥಳಿಯ ವೃಂದದ ಹುದ್ದೆಗೆ ಮತ್ತು ಮಿಕ್ಕುಳಿದ ವೃಂದದ ಹುದ್ದೆಗಳಿಗೂ ಅಯ್ಕೆಯಾದಲ್ಲಿ, ಯಾವ ವೃಂದದ ಹುದ್ದೆಗೆ ಅಯ್ಕೆ ಬಯಸುವರೆಂಬ ಆದ್ಯತೆಯನ್ನು ಅರ್ಜಿಯಲ್ಲಿ ನಮೂದಿಸತಕ್ಕದ್ದು.

ಅಭ್ಯರ್ಥಿಯು ಕೇವಲ ಒಂದು ಬಾರಿ ಮಾತ್ರ ಒಂದು ಜಿಲ್ಲೆಗೆ ಸೀಮಿತಗೊಳಿಸಿ ಅರ್ಜಿಯನ್ನು ಸಲ್ಲಿಸಬಹುದಾಗಿದ್ದು, ಒಮ್ಮೆ ಸಲ್ಲಿಸಿದ ಅರ್ಜಿಯನ್ನು ಯಾವುದೇ ಕಾರಣದಿಂದಲೂ ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ.

14) **ಸೂಚನೆ:**

ಅಪೂರ್ಣವಾಗಿ ಭರ್ತಿ ಮಾಡಿದ ಅರ್ಜಿ, ಅಪೂರ್ಣವಾದ ಭಾವಚಿತ್ರ ಹಾಗೂ ಅಪೂರ್ಣವಾದ ಸಹಿಯನ್ನು **upload** ಮಾಡಿದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ **on-line** ಮೂಲಕ ಅರ್ಜಿ ಭರ್ತಿ ಮಾಡಿ **upload** ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಗಳಿಂದ ಪಡೆದುಕೊಂಡಿರತಕ್ಕದ್ದು ಹಾಗೂ ಅದೇ ಮೀಸಲಾತಿ ಪ್ರಮಾಣ ಪತ್ರ/ ಇತರೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಸಂದರ್ಶನಕ್ಕೆ/ ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಪರಿಶೀಲನೆಗೆ ಹಾಜರುಪಡಿಸಬೇಕು. ನಿಗದಿತ ನಮೂನೆಯಲ್ಲದೆ ಇತರೆ ನಮೂನೆಗಳಲ್ಲಿ ಅಥವಾ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ತಪ್ಪಿದಲ್ಲಿ, ಇವರ ಮೀಸಲಾತಿಯನ್ನು ತಿರಸ್ಕರಿಸಲಾಗುವುದು/ ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

**15) ಅರ್ಜಿಯ ಜೊತೆ ಸಂಬಂಧಿಸಿದ ಈ ಕೆಳಕಂಡ ಪ್ರಮಾಣ ಪತ್ರಗಳನ್ನು ತಪ್ಪದೆ ಅಪ್‌ಲೋಡ್ ಮಾಡುವುದು. ಮೌಖಿಕ ಸಂದರ್ಶನಕ್ಕೆ ಅರ್ಹರಾದಲ್ಲಿ ಸದರಿ ಮೂಲ ಪ್ರತಿಗಳನ್ನು ಹಾಜರುಪಡಿಸುವುದು.**

1) ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ/ ಸೆಮಿಸ್ಟರ್‌ಗಳ ಅಂಕಪಟ್ಟಿಗಳು
2) ಕೇಂದ್ರ/ರಾಜ್ಯ ಸರ್ಕಾರದ ಇಲಾಖೆಗಳಲ್ಲಿ/ ಅರೆ ಸರ್ಕಾರಿ ಸಂಘ ಸಂಸ್ಥೆಗಳಲ್ಲಿ/ ಇತರೆ ಸಂಘ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿದ್ದರೆ ನಿರಾಕ್ಷೇಪಣಾ ಪತ್ರಗಳು.
3) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1 ,ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ ಮತ್ತು ಪ್ರವರ್ಗ–3ಬಿ ಗಳ ಮೀಸಲಾತಿ ಪ್ರಮಾಣ ಪತ್ರಗಳು ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ)
4) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2 ರಲ್ಲಿ(ಮೀಸಲಾತಿ ಕೋರಿದ್ದಲ್ಲಿ)
5) ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
6) ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಅಥವಾ ಕ್ಯುಮ್ಯೂಲೇಟಿವ್ ರೆಕಾರ್ಡ್ ಪ್ರತಿ ಅಥವಾ ಶಾಲಾ ವರ್ಗಾವಣೆ ಪ್ರಮಾಣ ಪತ್ರ.
7) ಕಂಪ್ಯೂಟರ್ ನಿರ್ವಹಣೆಯಲ್ಲಿ ಸಂಬಂಧಪಟ್ಟ ಹುದ್ದೆಗಳಿಗೆ ನಿಗದಿಪಡಿಸಿರುವಂತೆ ಜ್ಞಾನ ಹೊಂದಿರುವ ಪ್ರಮಾಣ ಪತ್ರಗಳು/ ಟ್ಯಾಲಿ ಪ್ರಮಾಣ ಪತ್ರಗಳು.

ವ್ಯವಸ್ಥಾಪಕ ನಿರ್ದೇಶಕರು

**8)** ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳದಲ್ಲಿ ಸಂಚಿತ ವೇತನ ಆಧಾರದಲ್ಲಿ ಹಾಲಿ ಕೆಲಸ ನಿರ್ವಹಿಸುತ್ತಿರುವವರು ದೃಢೀಕರಣವನ್ನು ಪಡೆದು ಅರ್ಜಿಯೊಂದಿಗೆ ಅಫ್ ಲೋಡ್ (Upload) ಮಾಡತಕ್ಕದ್ದು. ದೃಢೀಕರಣದ ನಮೂನೆಯನ್ನು ಅಧಿಸೂಚನೆ ಕೊನೆಯಲ್ಲಿ ನೀಡಲಾಗಿದೆ.

9) ಮೀಸಲಾತಿ ಪ್ರಮಾಣ ಪತ್ರ ಇತ್ಯಾದಿಗಳ ಬಗ್ಗೆ ಅಭ್ಯರ್ಥಿಯು ಖಾತ್ರಿಪಡಿಸಿಕೊಂಡು ಅರ್ಜಿ ಸಲ್ಲಿಸುವುದು ಅವರ ವೈಯಕ್ತಿಕ ಜವಾಬ್ದಾರಿಯಾಗಿರುತ್ತದೆ.

10) ಅಭ್ಯರ್ಥಿಗಳು ವಿದ್ಯಾರ್ಹತೆ, ಮೀಸಲಾತಿ, ಜನ್ಮ ದಿನಾಂಕ ಗ್ರಾಮೀಣ, ಅಂಗವಿಕಲ ಇತರೆ ಅವಶ್ಯಕ ದಾಖಲಾತಿಗಳನ್ನು **ಸ್ವಯಂ ದೃಢೀಕರಿಸಿದ** ಪ್ರತಿಗಳನ್ನು ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ. ಅಪೂರ್ಣವಾಗಿರುವ ಮತ್ತು ಸಹಿ ಮಾಡದಿರುವ ಹಾಗೂ ಪೋಟೋ ಇಲ್ಲದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

11) ಅನುಚ್ಛೇದ 371(ಜೆ) ಮೇರೆಗೆ ಅರ್ಹತಾ ಪ್ರಮಾಣ ಪತ್ರ

12) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಪೋಟೋ ಪ್ರತಿಯನ್ನು ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.

13) ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಸೇರ್ಪಡೆಯಾಗಿದೆ ಎಂಬುವುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಹಕ್ಕು ದೊರೆಯುವುದಿಲ್ಲ.

14) ಯಾವುದೇ ಸಂದರ್ಭದಲ್ಲಿ, ಯಾವುದೇ ಕಾರಣವನ್ನು ನೀಡದೇ ನೇಮಕಾತಿ ಪ್ರಕ್ರಿಯೆಯನ್ನು ರದ್ದುಗೊಳಿಸುವ, ತಡೆಹಿಡಿಯುವ, ಬದಲಾಯಿಸುವ ಅಧಿಕಾರವನ್ನು ಮಹಾಮಂಡಳ ಹೊಂದಿರುತ್ತದೆ.

15) ನೇಮಕಾತಿ ಪ್ರಕಟಣೆಯಲ್ಲಿ ಆಯಾ ಹುದ್ದೆಗಳಿಗೆ ಸೂಚಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರಬೇಕು. ನಿಗದಿಪಡಿಸಿದ ವಿದ್ಯಾರ್ಹತೆಯನ್ನು ಹೊರತುಪಡಿಸಿ ಇತರೆ ಯಾವುದೇ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ.

16) ಅಭ್ಯರ್ಥಿಗಳ ಆಯ್ಕೆ ನಂತರ ಅರ್ಜಿಯ ಜೊತೆ ಸಲ್ಲಿಸಿರುವ ಅಂಕಪಟ್ಟಿ/ ಮೀಸಲಾತಿ ಮತ್ತು ಇತರೆ ದಾಖಲೆಗಳ ನೈಜತೆಯನ್ನು ಸಂಬಂಧಪಟ್ಟ ಸಂಸ್ಥೆ/ಪ್ರಾಧಿಕಾರ/ ಶಾಲಾ/ ಕಾಲೇಜ್/ ವಿಶ್ವವಿದ್ಯಾಲಯಗಳಿಂದ ದೃಢೀಕರಿಸಿಕೊಂಡು ನೇಮಕಾತಿ ಆದೇಶ ಹೊರಡಿಸುವ ಹಕ್ಕನ್ನು ಮಹಾಮಂಡಳವು ಕಾಯ್ದಿರಿಸಿಕೊಂಡಿದೆ.

17) ಮಹಾಮಂಡಳದ ಅನುಮೋದಿತ ಸೇವಾ/ಪೂರಕ ನಿಯಮಗಳು, ವೃಂದ ಮತ್ತು ನೇಮಕಾತಿ ನಿಯಮಗಳು ಅನ್ವಯವಾಗುತ್ತವೆ.

18) ಗ್ರೇಡ್ ಅಂಕಗಳನ್ನು ಪಡೆದ ಅಭ್ಯರ್ಥಿಗಳು ಅವರ ಗ್ರೇಡ್ ಅಂಕಗಳನ್ನು ಶೇಕಡಾವಾರು ಅಂಕಗಳಿಗೆ ಪರಿವರ್ತಿಸಿ ಶಾಲಾ/ ಕಾಲೇಜ್/ ವಿಶ್ವವಿದ್ಯಾಲಯ ನೀಡಿರುವ ಪ್ರಮಾಣ ಪತ್ರದಲ್ಲಿ ನಮೂದಿಸಿರುವ ಶೇಕಡಾವಾರು ಅಂಕಗಳನ್ನು ತಪ್ಪದೇ ನಮೂದಿಸಿರಬೇಕು.

ಅರಳಿ ಸೂರ್ಯಕಾಂತ
ವ್ಯವಸ್ಥಾಪಕ ನಿರ್ದೇಶಕರು

KSCCF

## ನಮೂನೆ-(1)

## ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

**ಇವರಿಗೆ:**

**ತಹಶೀಲ್ದಾರರು,**

**_______ ತಾಲ್ಲೂಕು,**

**________ ಜಿಲ್ಲೆ.**

ಶ್ರೀ/ಶ್ರೀಮತಿ - - - - - - - - - - - - - ಎಂಬುವವರ ಮಗ/ಮಗಳು/ಪತಿ/ಪತ್ನಿ - - - - - - ಆದ ನಾನು ಮೇಲುಸ್ತರದಲ್ಲಿ ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ

   ತಾಲ್ಲೂಕು:

   ಜಿಲ್ಲೆ:
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ/ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು

   ಪ್ರಾಥಮಿಕ

   ಮಾಧ್ಯಮಿಕ

   ಪ್ರೌಢ
7. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಜೀವಂತವಿಲ್ಲದಿದ್ದರೆ

   ಇವರ ಒಟ್ಟು ಆದಾಯ ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ

   1) ವೇತನ ಶ್ರೇಣಿ)

   2) ಜಮೀನಿನ ವಿವರ

   3) ಇತರ ಮೂಲಗಳು
8. ಆದಾಯ ತೆರಿಗೆ ಪಾವತಿದಾರರೇ?
9. ಸಂಪತ್ತು ತೆರಿಗೆ ಪಾವತಿದಾರರೇ?
10. ಮಾರಾಟ ತೆರಿಗೆ ಪಾವತಿದಾರರೇ?

**ನಮೂನೆ–(1)**

**ಪ್ರಮಾಣೀಕೃತ ಘೋಷಣೆ**

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ/ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ: ತಮ್ಮ ವಿಧೇಯ

ದಿನಾಂಕ: (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣಿಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ: ತಂದೆ/ತಾಯಿ/ಪೋಷಕರ ಸಹಿ

ದಿನಾಂಕ: ತಂದೆ/ತಾಯಿ/ಪೋಷಕರು ಜೀವಂತವಿಲ್ಲದಿದ್ದಲ್ಲಿ

(ಹೆಂಡತಿ/ ಗಂಡ ಇವರ ಸಹಿ)

ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರ/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ

(ಪೂರ್ಣ ವಿಳಾಸದೊಂದಿಗೆ)

1)

2)

**ಪರಿಶೀಲನಾ ಪ್ರಮಾಣ ಪತ್ರ**

1. ಶ್ರೀ/ಶ್ರೀಮತಿ – – – – – – – – – – – – – ಎಂಬುವವರ ಮಗ/ಮಗಳು/ಪತಿ/ಪತ್ನಿ ಶ್ರೀ/ಶ್ರೀಮತಿ/ಕುಮಾರಿ – – – – – ಎಂಬುವವರು ಕರ್ನಾಟಕ ರಾಜ್ಯದ – – – – – – – – ಜಿಲ್ಲೆಯ ವಿಭಾಗ– – – – – – – – ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.
2. ಶ್ರೀ/ಶ್ರೀಮತಿ/ಕುಮಾರಿ – – – – – ಇವರ ತಂದೆ/ತಾಯಿ/ಪೋಷಕರ/ಪತಿ/ಪತ್ನಿ ಇವರು ಸರ್ಕಾರಿ ಆದೇಶ ಸಂಖ್ಯೆ:ಎಸ್.ಡಬ್ಲ್ಯೂಡಿ 251/ಬಿ.ಸಿ.ಎ./94, ಬೆಂಗಳೂರು, ದಿನಾಂಕ 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ creamylayer ಬರುವುದಿಲ್ಲವೆಂದು ಪ್ರಮಾಣಿಕರಿಸಲಾಗಿದೆ.

ಸ್ಥಳ: ತಹಶೀಲ್ದಾರ್

ದಿನಾಂಕ:

– – –ತಾಲ್ಲೂಕು

ಕಛೇರಿಯ ಮೊಹರು

**ಸೂಚನೆ:** 1) ಇದರಲ್ಲಿ ಉಪಯೋಗಿಸಲಾದ 'ಸಾಮಾನ್ಯ ನಿವಾಸಿ' ಎಂಬ ಪದವು 1950 ರಿಂದ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದಲ್ಲಿನ ಅರ್ಥವನ್ನು ಹೊಂದಿರುತ್ತದೆ.

2) ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್. ಡಬ್ಲ್ಯೂಡಿ 251 /ಬಿ.ಸಿ.ಎ/94, ಬೆಂಗಳೂರು, ದಿನಾಂಕ 31.01.1995 ರನ್ವಯ ಮೇಲುಸ್ತರದಲ್ಲಿ creamylayer ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

## ನಮೂನೆ–2

## ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ – – – – – – – – – – – – – ರವರ ಮಗ/ಮಗಳು/ಪತಿ/ಪತ್ನಿ ಶ್ರೀ/ಶ್ರೀಮತಿ/ಕುಮಾರಿ – – – – – ಇಲ್ಲಿ –––– – ತಾಲ್ಲೂಕು – – – – – – ಗ್ರಾಮದಲ್ಲಿ – – – – – – ವಾಸವಾಗಿರುವ ಇವರು ಒಂದನೇ ತರಗತಿಯಿಂದ – – – – – – – – – – ತರತಿಯವರೆಗೆ – – – – – – – ಇಲ್ಲಿ ––––– ತಾಲ್ಲೂಕು – – – – – – ಪಟ್ಟಣ – – – – – – – – – – – – ಶಾಲೆಯಲ್ಲಿ ವ್ಯಾಸಂಗ ಮಾಡಿ – – – – – – – ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯ ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಸಹಿ

ಮೇಲು ರುಜು ಕ್ಷೇತ್ರ ಶಿಕ್ಷಣ ಅಧಿಕಾರಿ

ಮುಖ್ಯೋಪಾಧ್ಯಾಯರ ಸಹಿ ಮತ್ತು ಕಛೇರಿಯ ಮೊಹರು

ಸಂಸ್ಥೆಯ ಮೊಹರು

ಸ್ಥಳ:
ದಿನಾಂಕ:

**(ಪ.ಜಾ/ಪ.ಪಂ.ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ–ಡಿ**

**(ನಿಯಮ 3ಎ (2) (3) ನೋಡಿ) ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ.) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ**

**ಪ್ರಮಾಣ ಪತ್ರ**

– – – – ರಾಜ್ಯದ/ಕೇಂದ್ರಾಡಳಿತ ಪ್ರದೇಶದ – – – – ಜಿಲ್ಲೆಯ/ವಿಭಾಗದ – – – – – – – – ಗ್ರಾಮ/ಪಟ್ಟಣದ ನಿವಾಸಿಯಾದ ಶ್ರೀ/ಶ್ರೀಮತಿ – – – – – – – – – – – – – – ಎಂಬುವವರ ಮಗ/ಮಗಳು/ಪತಿ/ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ – – – – – – – – – ಇವರು ಅನುಸೂಚಿತ ಜಾತಿ/ ಅನುಸೂಚಿತ ಬುಡಕಟ್ಟು ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ ಸೇರಿದವರಾಗಿರುತ್ತಾರೆಂದು ಪ್ರಮಾಣಿಕರಿಸಿದೆ.

ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ 1950
ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ 1950
ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ 1950
ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ 1950
ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ 1951
ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಡು) ಆದೇಶ 1958
ಮುಂಬಯಿ ರಾಜ್ಯ ಪುನರ್ ರಚನಾ ಅಧಿಯಮ, 1960, ಪಂಜಾಬ್ ರಾಜ್ಯಪುನರ್ ರಚನಾ ಅಧಿಯಮ,1986, ಹಿಮಾಚಲ್ ಪ್ರದೇಶ ರಾಜ್ಯ ರಚನಾ ಅಧಿಯಮ, 1970 ಮತ್ತು ಈಶಾನ್ಯ ರಾಜ್ಯಗಳ ಪುನರ್ ರಚನಾ ಅಧಿಯಮ, 1971 ರ ಮೂಲ ತಿದ್ದುಪಡಿಯಾದಂತೆ)
ಸಂವಿಧಾನ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1978ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಪ್ರದೇಶ 1959
ಸಂವಿಧಾನ (ದಾದರ್ ಮತ್ತು ನಾಗರಹವೇಲಿ)ಅನುಸೂಚಿತ ಜಾತಿಗಳು ಆದೇಶ 1962
ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳು ಆದೇಶ 1984
ಸಂವಿಧಾನ ಅನುಸೂಚಿತ ಜಾತಿಗಳು ಉತ್ತರ ಪ್ರದೇಶ ಆದೇಶ 1967
ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ 1950
ಸಂವಿಧಾನ (ಗೋವಾ, ದಾಮನ್ ಮತ್ತು ಡಿಯೂ)ಅನುಸೂಚಿತ ಜಾತಿ ಆದೇಶ 1988
ಸಂವಿಧಾನ (ನಾಗಲ್ಯಾಂಡ್)ಅನುಸೂಚಿತ ಬುಡಕಟ್ಟುಗಳ ಆದೇಶ

ಶ್ರೀ/ಶ್ರೀಮತಿ – – – – – – – – – – – – ಎಂಬುವವರ ಮಗ/ಮಗಳು/ಪತಿ/ಪತ್ನಿ ಶ್ರೀ/ಶ್ರೀಮತಿ/ಕುಮಾರಿ – – – – – ಎಂಬುವವರು ಕರ್ನಾಟಕ ರಾಜ್ಯದ – – – – – – – – ಜಿಲ್ಲೆಯ ವಿಭಾಗ– – – – – – – – – ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ .

ಸಹಿ

ಸ್ಥಳ:
ದಿನಾಂಕ:

ತಹಶೀಲ್ದಾರ್ -- – – – –
ಪದನಾಮ
ಕಛೇರಿಯ ಮೊಹರಿನೊಂದಿಗೆ

**ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ**

**ನಮೂನೆ-ಇ**

**(ನಿಯಮ 3ಎ (2) (3) ನೋಡಿ)**

**ಹಿಂದುಳಿದ ವರ್ಗಗಳಿಗೆ (ಪ್ರವರ್ಗ-1ಕ್ಕೆ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ**

- - - - -ಗ್ರಾಮ/ಪಟ್ಟಣದ/ನಗರ ನಿವಾಸಿಯಾದ ಶ್ರೀ/ಶ್ರೀಮತಿ - - - - - - - - - - - - ಇವರ ಮಗ/ಮಗಳು/ಪತಿ/ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ - - - - - - - - ಇವರು ಹಿಂದುಳಿದ ವರ್ಗಗಳಿಗೆ (ಪ್ರವರ್ಗ) - - - -- -ಜಾತಿಯ - - - - - ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸಹಿ
ತಹಶೀಲ್ದಾರ್ -- - - - -
ಪದನಾಮ
ಕಛೇರಿಯ ಮೊಹರಿನೊಂದಿಗೆ

ಸ್ಥಳ:
ದಿನಾಂಕ:

**(ಪ್ರವರ್ಗ–2ಎ, 2ಬಿ, 3ಎ, 3ಬಿ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ**

**ನಮೂನೆ – ಎಫ್**

**(ನಿಯಮ 3ಎ (2) (3) ನೋಡಿ)**

**ಹಿಂದುಳಿದ ವರ್ಗಗಳಿಗೆ (ಪ್ರವರ್ಗ–2ಎ, 2ಬಿ, 3ಎ, 3ಬಿ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಪ್ರಮಾಣ ಪತ್ರ**

– – – – – – – –ರಲ್ಲಿ ವಾಸವಾಗಿರುವ ಶ್ರೀ/ಶ್ರೀಮತಿ – – – – – – – – – – – – ಇವರ ಮಗ/ಮಗಳು/ಪತಿ/ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ – – – – – – – – – ಇವರ ಮತ್ತು ಆತನ /ತಂದೆ/ತಾಯಿ/ಪೋಷಕರ/ಪತಿ/ಪತ್ನಿಯು ಸರ್ಕಾರಿ ಆದೇಶಗಳ ಸಂಖ್ಯೆ ಎಸ್.ಡಬ್ಲ್ಯೂಡಿ225 ಬಿಸಿಎ 2000 ದಿನಾಂಕ 30–03–2002 ರಲ್ಲಿ ನಿರ್ದಿಷ್ಟಪಡಿಸಿದ ಮೇಲುಸ್ತರದ ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು

ಅಭ್ಯರ್ಥಿಯಾಗಲಿ ಅಥವಾ ಆತನ ತಂದೆ/ತಾಯಿ/ಪೋಷಕರ/ಪತಿ/ಪತ್ನಿ ಯಾಗಲಿ ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು

ಅಥವಾ

ಸಾರ್ವಜನಿಕರ ವಲಯ ಉದ್ಯಮದಲ್ಲಿ ತತ್ಸಮಾನ ಹುದ್ದೆಯನ್ನು ಹೊಂದಿರುವುದಿಲ್ಲ

ಅಥವಾ

ಖಾಸಗಿ ನಿಯೋಜಕರ ಕೆಳಗೆ 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು

ಅಥವಾ

ಆತನ/ತಂದೆ/ತಾಯಿ/ಪೋಷಕರ/ಪತಿ/ಪತ್ನಿಯ ಆದಾಯವು 8 ಲಕ್ಷ ಮೀರುವುದಿಲ್ಲವೆಂದು

ಅಥವಾ

ಕರ್ನಾಟಕ ಭೂ ಸುಧಾರಣ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ ತಂದೆ/ತಾಯಿ/ಪೋಷಕರ/ಪತಿ/ಪತ್ನಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ ತಂದೆ/ತಾಯಿ/ಪೋಷಕರ/ಪತಿ/ಪತ್ನಿಯು ಅಥವಾ ಇವರಿಬ್ಬರೂ 10 ಯೂನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣಿಕರಿಸಲಾಗಿದೆ. ಸರ್ಕಾರಿ ಆದೇಶಗಳ ಸಂಖ್ಯೆ ಎಸ್.ಡಬ್ಲ್ಯೂಡಿ225 ಬಿಸಿಎ 2000 ದಿನಾಂಕ 30–03–2002 ರನ್ವಯ ಹಿಂದುಳಿದ ವರ್ಗಗಳ ಪ್ರವರ್ಗ – – – – (2ಎ, 2ಬಿ, 3ಎ, 3ಬಿ)ಕ್ಕೆ ಸೇರಿರುತ್ತಾರೆ.

ಸ್ಥಳ:
ದಿನಾಂಕ:

ತಹಶೀಲ್ದಾರ್ -- – – – –
ಪದನಾಮ
ಕಛೇರಿಯ ಮೊಹರಿನೊಂದಿಗೆ

**ಸೂಚನೆ:**

1) ಸರ್ಕಾರದ ಆದೇಶದ ಸಂಖ್ಯೆ: ಹಿಂವಕ 304 ಬಿಸಿಎ 2017 ದಿನಾಂಕ 14.09.2018 ರಂತೆ ಹಿಂದುಳಿದ ವರ್ಗಗಳ ಪ್ರವರ್ಗ–2ಎ, 2ಬಿ, 3ಎ, 3ಬಿ ಮೀಸಲಾತಿಗಳಿಗೆ ಅನ್ವಯಿಸುವಂತೆ ನಿಗದಿಪಡಿಸಿರುವ ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರ/ಪತಿ/ಪತ್ನಿಯ ವಾರ್ಷಿಕ ಒಟ್ಟು ಆದಾಯ ಮಿತಿಯನ್ನು (Gross Annual Income) ರೂ.8.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ. ಆದುದರಿಂದ ಮೀಸಲಾತಿ ಪ್ರಮಾಣ ಪತ್ರವನ್ನು ನೀಡುವ ಅಧಿಕೃತ ಅಧಿಕಾರಿಯು ದಿನಾಂಕ 14.09.2018ರ ಸರ್ಕಾರಿ ಆದೇಶದಲ್ಲಿನ ಅಂಶಗಳನ್ನು ವಿವರವಾಗಿ ಖಚಿತಪಡಿಕೊಂಡ ನಂತರವೇ ನೀಡತಕ್ಕದ್ದು.
2) ಈ ಮೇಲೆ ಹೇಳಲಾದ ಸರ್ಕಾರಿ ಆದೇಶದಲ್ಲಿನ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಸದರಿ ಮೀಸಲಾತಿ ಯನ್ನು ಕ್ಲೈಂ ಮಾಡುವ ಅಭ್ಯರ್ಥಿಗಳು ಅದರಂತೆ ಜಾತಿ/ಮೀಸಲಾತಿ/ಪ್ರಮಾಣ ಪತ್ರಗಳನ್ನು ಮಾಡಿಸಲು ಸೂಚಿಸಿದೆ.

## CERTIFICATE FOR THE PERSONS WITH DIS ABILITIES

This is to certify that Sri/Smt/Kum. . . . . . . . . . . . . Son/wife/daughter of Shri. . . . . . . . . . . . . . Age.. .. . . old, male/female, Registration No.. . . . . . . . is a case pf . . . . . . He/she/ is physically disabled/visual disabled/speech & hearing disaled and has. . . . . . % (. . . . .percent)

Permanent (physical imparment visual impairment speech & hearing impairment) in relation to his/her. . . . . .

Note:

1. This condition is progressive/non- progressive/likely to improve/not likely to improve.
2. Re. assessment is not recommended/ is recommended of. . . . . . . . monthly/years Strike out which is not applicable

(recent attested photograph showing The disability affixed here)

| Orthopedie/Eye/<br>ENT/Phychiatrist<br>Member,<br>Medical Board | Senior<br>Specialist<br>Member,<br>Medical Board | Chairperson<br>District Surgeon<br>District Hospital |
|---|---|---|

## ನಮೂನೆ–7

## ಪ್ರಸ್ತುತ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ನೇಮಕಾತಿ ಪ್ರಾಧಿಕಾರಿಗಳಿಂದ ಪಡೆಯಬೇಕಾದ ನಿರಾಕ್ಷೇಪಣಾ/ಅನುಮತಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ – – – – – – – – – – – ಇವರ ತಂದೆ– – – – – ಇವರು – – – – – – ದಿನಾಂಕ – – – – -- ರಿಂದ – – – – ಸಂಸ್ಥೆಯಲ್ಲಿ – – – – – ಹುದ್ದೆಯಲ್ಲಿ ಖಾಯಂ/ಹಂಗಾಮಿಯಾಗಿ ಕಾರ್ಯನಿರ್ವಹಿಸುತ್ತಿದ್ದು. ಸದರಿಯವರು ಕರ್ನಾಟಕ ರಾಜ್ಯ ಸಹಕಾರಿ ಗ್ರಾಹಕರ ಮಹಾಮಂಡಳ ನಿ., ನೇಮಕಾತಿ ಅಧಿಸೂಚನೆಯಂತೆ ಅಹ್ವಾನಿಸಿರುವ – – – – – ಹುದ್ದೆಗೆ ಅರ್ಜಿ ಸಲ್ಲಿಸಲು ಈ ಸಂಸ್ಥೆ/ ಇಲಾಖೆಯಿಂದ ಯಾವುದೇ ಆಕ್ಷೇಪಣೆ ಇರುವುದಿಲ್ಲ.

ಪ್ರಸ್ತುತ ನೇಮಕಾತಿ ಪ್ರಾಧಿಕಾರಿಗಳ ಪದನಾಮ
ಮೊಹರು

**ನಮೂನೆ-8**

**ಅನುಬಂಧ –ಎ**

**ಅರ್ಹತಾ ಪ್ರಮಾಣ ಪತ್ರ**

**ಅನುಚ್ಛೇದ 371 (ಜೆ) ಮೇರೆಗೆ)**
**(3(3)ನೇ ನಿಯಮ ನೋಡಿ)**

**ಪ್ರಮಾಣ ಪತ್ರ ನೀಡಲು ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು, 2013**

ಶ್ರೀ/ಶ್ರೀಮತಿ – – – – – – – – – – – ರವರು – – – – – ರವರ ಮಗ/ಮಗಳು/ ಪತಿ/ಪತ್ನಿಯಾಗಿದ್ದು ಇವರು ಕರ್ನಾಟಕ ರಾಜ್ಯದ – – – – – ಜಿಲ್ಲೆಯ – – – – – ತಾಲ್ಲೂಕಿನ – – – – – – – – ಗ್ರಾಮ/ಪಟ್ಟಣದ ಸ್ಥಳೀಯ ವ್ಯಕ್ತಿಯಾಗಿದ್ದಾರೆ.

ಹೆಸರು– – – – –
ಅಸಿಸ್ಟೆಂಟ್ ಕಮೀಷನರ್
– – – – – –– – ಉಪ ವಿಭಾಗ
– – – –ಜಿಲ್ಲೆ

ಸ್ಥಳ:
ದಿನಾಂಕ:

## **ನಮೂನೆ – 9**

(ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳದಲ್ಲಿ ಸಂಚಿತ ವೇತನದ ಆಧಾರದಲ್ಲಿ ಹಾಲಿ ಕೆಲಸ ನಿರ್ವಹಿಸುತ್ತಿರುವವರು ಸಲ್ಲಿಸಬೇಕಾದ ದೃಢೀಕರಣ ಪತ್ರ)

### ದೃಢೀಕರಣ ಪತ್ರ

ಕ್ರ.ಸಂ. ದಿನಾಂಕ:

ಶ್ರೀ/ಶ್ರೀಮತಿ. . . . . . . . . . . . . . . . . . . . . .(ತಂದೆಯ ಹೆಸರು). . . . . . . . ಇವರು ಜನತಾ ಬಜಾರ್/ಕರಾಸಗ್ರಾಮ . . . . . . . . . . . . . . ಶಾಖೆಯಲ್ಲಿ ಸಂಚಿತ ವೇತನದ ಆಧಾರದಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿದ್ದಾರೆಂದು; ಮಹಾಮಂಡಳದ ನೇಮಕಾತಿ ಪ್ರಕಟಣೆಯಲ್ಲಿ ಪ್ರಕಟಿಸಲಾದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆಂದು ದೃಢೀಕರಿಸಲಾಗಿದೆ.

ವ್ಯವಸ್ಥಾಪಕ ನಿರ್ದೇಶಕರು
ಮೇಲು ರುಜು